ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 127 Monday **02-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 127 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಜಲಮೂಲಗಳ ಒಡಲು ಖಾಲಿ: ಟ್ಯಾಂಕರ್ ನೀರಿಗಾಗಿ ಹೆಚ್ಚಿದ ಆತಂಕ

ಬೇಸಿಗೆ ಆರಂಭಕ್ಕೂ ಮುನ್ನವೇ ನೀರಿಗಾಗಿ ಟ್ಯಾಂಕರ್‌ಗಳ ಮೊರೆ: ಹೋಟೆಲ್, ಮನೆ ನಿರ್ಮಾಣ, ಕೃಷಿಗೂ ಟ್ಯಾಂಕರ್ ನೀರೇ ಆಧಾರ

"ಮುಂಜಾನೆಯ ಮೆರಗು"

ಜಗಳೂರು ನ, 01– ಮಳೆ ಕೊರತೆಯಿಂದಾಗಿ ಅಂತರ್ಜಲ ಮಟ್ಟ ಕುಸಿಯುವ ಆತಂಕ ಎದುರಾಗಿದ್ದು, ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ಹಾಗೂ ದೈನಂದಿನ ಬಳಕೆಯ ನೀರಿಗಾಗಿ ಟ್ಯಾಂಕರ್‌ಗಳ ಮೇಲಿನ ಅವಲಂಬನೆ ಹೆಚ್ಚಾಗುತ್ತಿದೆ. ಇನ್ನೂ ಬೇಸಿಗೆ ಕಾಲ ಆರಂಭವಾಗುವ ಮುನ್ನವೇ ಟ್ಯಾಂಕರ್ ನೀರಿಗೆ ಬೇಡಿಕೆ ಹೆಚ್ಚಾಗಿರುವುದು ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಜಲ ಸಂಕಷ್ಟದ ಮುನ್ಸೂಚನೆಯಂತಿದೆ.

ತಾಲೂಕಿನ ಹಲವು ಗ್ರಾಮಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ನೀರಿನ ಮೂಲಗಳು ಸಮರ್ಪಕವಾಗಿ ಮರುಪೂರಣಗೊಂಡಿಲ್ಲ. ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಅಗತ್ಯಕ್ಕೆ ಅನುಗುಣವಾಗಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಗ್ರಾಮೀಣ ಭಾಗದಲ್ಲಿ ಜನರು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.



ಹೋಟೆಲ್‌ಗಳಿಗೂ ಟ್ಯಾಂಕರ್ ನೀರೇ ಅನಿವಾರ್ಯ:

ಜಗಳೂರು ಪಟ್ಟಣದ ಕೆಲವು ಹೋಟೆಲ್‌ಗಳಲ್ಲಿ ದೈನಂದಿನ ಅಡುಗೆ, ಸ್ವಚ್ಛತೆ ಸೇರಿದಂತೆ ವಿವಿಧ ಕೆಲಸಗಳಿಗೆ ಟ್ಯಾಂಕರ್ ಮೂಲಕ ಪೂರೈಕೆಯಾಗುವ ನೀರನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಸಾರ್ವಜನಿಕ ನೀರಿನ ಮೂಲಗಳಿಂದ ಅಗತ್ಯ ಪ್ರಮಾಣದಲ್ಲಿ ನೀರು ದೊರೆಯದ ಹಿನ್ನೆಲೆಯಲ್ಲಿ ಹೋಟೆಲ್ ಮಾಲೀಕರು ಟ್ಯಾಂಕರ್ ನೀರು ಖರೀದಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ.

ಮನೆ ನಿರ್ಮಾಣಕ್ಕೂ ಟ್ಯಾಂಕರ್ ಮೊರೆ:

ಪಟ್ಟಣ ಹಾಗೂ ಗ್ರಾಮೀಣ ಭಾಗಗಳಲ್ಲಿ ನೂತನವಾಗಿ ಮನೆ ನಿರ್ಮಿಸಿಕೊಳ್ಳುತ್ತಿರುವವರು ಕಟ್ಟಡ ಕಾಮಗಾರಿಗೆ ಅಗತ್ಯವಿರುವ ನೀರಿಗಾಗಿ ಟ್ಯಾಂಕರ್‌ಗಳ ಮೊರೆ ಹೋಗುತ್ತಿದ್ದಾರೆ. ಕಟ್ಟಡದ ಅಡಿಪಾಯ, ಕಾಂಕ್ರೀಟ್, ಇಟ್ಟಿಗೆ ಕೆಲಸ ಸೇರಿದಂತೆ ವಿವಿಧ ಹಂತಗಳಲ್ಲಿ ನೀರಿನ ಅವಶ್ಯಕತೆ ಹೆಚ್ಚಿರುವುದರಿಂದ ಟ್ಯಾಂಕರ್ ನೀರಿನ ಬೇಡಿಕೆ ಮತ್ತಷ್ಟು ಹೆಚ್ಚಾಗಿದೆ. ಇದರಿಂದ ಮನೆ ನಿರ್ಮಾಣದ ವೆಚ್ಚದಲ್ಲಿಯೂ ಹೆಚ್ಚುವರಿ ಹೊರೆ ಬೀಳುತ್ತಿದೆ.

ಬೆಳೆ ಉಳಿಸಿಕೊಳ್ಳಲು ರೈತರ ಕಸರತ್ತು:

ಮಳೆ ಕೊರತೆಯ ಪರಿಣಾಮ ಕೃಷಿ ಕ್ಷೇತ್ರದ ಮೇಲೂ ಬೀರಿದೆ. ಈಗಾಗಲೇ ಮಳೆ ಅಭಾವದಿಂದ ಸಂಕಷ್ಟದಲ್ಲಿರುವ ಕೆಲವು ರೈತರು ಕೈಗೆ ಬಂದ ಬೆಳೆಗಳನ್ನು ಉಳಿಸಿಕೊಳ್ಳುವ ಉದ್ದೇಶದಿಂದ ಟ್ಯಾಂಕರ್ ಮೂಲಕ ನೀರು ಖರೀದಿಸಿ ಜಮೀನುಗಳಿಗೆ ಹಾಯಿಸುತ್ತಿದ್ದಾರೆ. ಬೆಳೆಗಳಿಗೆ ಜೀವಜಲ ಒದಗಿಸಲು ರೈತರು ಮಾಡುತ್ತಿರುವ ಈ ಪ್ರಯತ್ನ ಕೃಷಿ ವೆಚ್ಚವನ್ನು ಮತ್ತಷ್ಟು ಹೆಚ್ಚಿಸುತ್ತಿದೆ. ಬೆಳೆ ಉಳಿದರೆ ಸಾಕು ಎಂಬ ಆಶಯದಿಂದ ರೈತರು ಹೆಚ್ಚುವರಿ ಹಣ ವ್ಯಯಿಸುವಂತಾಗಿದೆ.

ಬೇಸಿಗೆ ಮುನ್ನವೇ ಆತಂಕದ ಮುನ್ಸೂಚನೆ:

ಸಾಮಾನ್ಯವಾಗಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಬೇಡಿಕೆ ಹೆಚ್ಚಾಗುವುದು ಸಹಜ. ಆದರೆ ಈ ಬಾರಿ ಬೇಸಿಗೆ ಆರಂಭಕ್ಕೂ ಮುನ್ನವೇ ಟ್ಯಾಂಕರ್ ನೀರಿಗೆ ಬೇಡಿಕೆ ಹೆಚ್ಚುತ್ತಿರುವುದು ಮುಂದಿನ ದಿನಗಳ ಪರಿಸ್ಥಿತಿಯ ಬಗ್ಗೆ ಆತಂಕ ಮೂಡಿಸಿದೆ. ಈಗಲೇ ನೀರಿನ ಅಭಾವ ಎದುರಾಗುತ್ತಿದ್ದರೆ, ಮಾರ್ಚ್ ಮತ್ತು ಏಪ್ರಿಲ್ ತಿಂಗಳ ಬಿಸಿಲಿನ ತೀವ್ರತೆ ಹೆಚ್ಚಾದಾಗ ಪರಿಸ್ಥಿತಿ ಯಾವ ಹಂತಕ್ಕೆ ತಲುಪಬಹುದು ಎಂಬ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ.



ಒಟ್ಟಿನಲ್ಲಿ, ಮಳೆ ಕೊರತೆ ಕೇವಲ ಕೃಷಿ ಚಟುವಟಿಕೆಗಳನ್ನಷ್ಟೇ ಅಲ್ಲದೆ ಪಟ್ಟಣದ ವಾಣಿಜ್ಯ ಚಟುವಟಿಕೆ, ಮನೆ ನಿರ್ಮಾಣ ಹಾಗೂ ಜನರ ದೈನಂದಿನ ಬದುಕಿನ ಮೇಲೂ ಪರಿಣಾಮ ಬೀರುತ್ತಿದೆ. ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಳ್ಳುವ ಮುನ್ನವೇ ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಲ್ಲಿನ ನೀರಿನ ಮೂಲಗಳನ್ನು ಸಂರಕ್ಷಿಸುವುದು, ಕೆರೆಗಳ ನೀರು ಸಂಗ್ರಹ ಸಾಮರ್ಥ್ಯ ಹೆಚ್ಚಿಸುವುದು ಹಾಗೂ ಅಗತ್ಯವಿರುವ ಗ್ರಾಮಗಳಿಗೆ ಸಮರ್ಪಕವಾಗಿ ನೀರು ಪೂರೈಸಲು ತಾಲೂಕು ಆಡಳಿತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕಿದೆ.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ: ರೂಪಕಲಾ

"ಮುಂಜಾನೆಯ ಮೆರಗು"



ಜಗಳೂರು, ನ, 01– ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸ ಹಾಗೂ ಶ್ರೀಮಂತ ಸಾಹಿತ್ಯಿಕ ಪರಂಪರೆಯಿದೆ. ಇಂತಹ ವೈಶಿಷ್ಟ್ಯಪೂರ್ಣ ಭಾಷೆಯನ್ನು ಪ್ರತಿಯೊಬ್ಬರೂ ಪ್ರೀತಿಸಿ, ಗೌರವಿಸುವುದರ ಜತೆಗೆ ದೈನಂದಿನ ಜೀವನದಲ್ಲಿ ಕನ್ನಡವನ್ನು ಹೆಚ್ಚಾಗಿ ಬಳಸಬೇಕು ಎಂದು ಮೇದಗಿನಕೆರೆ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ರೂಪಕಲಾ ಹೇಳಿದರು.

ತಾಲೂಕಿನ ಮೇದಗಿನಕೆರೆ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಭಾನುವಾರ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ ತನ್ನದೇ ಆದ ವಿಶಿಷ್ಟ ಇತಿಹಾಸ, ಸಂಸ್ಕೃತಿ, ಸಾಹಿತ್ಯ ಹಾಗೂ ಪರಂಪರೆಯನ್ನು ಹೊಂದಿದೆ. ಕನ್ನಡ ನಾಡಿನ ನೆಲ, ಜಲ, ಭಾಷೆ ಮತ್ತು ಸಂಸ್ಕೃತಿಯ ಬಗ್ಗೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಅಭಿಮಾನ ಬೆಳೆಸಿಕೊಳ್ಳಬೇಕು. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆ ಕೇವಲ ರಾಜ್ಯೋತ್ಸವದ ಆಚರಣೆಗೆ ಸೀಮಿತವಾಗದೆ, ಪ್ರತಿನಿತ್ಯದ ಬದುಕಿನಲ್ಲಿ ಕನ್ನಡವನ್ನು ಬಳಸುವ ಮೂಲಕ ಸಾಧ್ಯವಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನ್ನಡಾಭಿಮಾನ ಕೇವಲ ಆಚರಣೆಗೆ ಸೀಮಿತವಾಗಬಾರದು, ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು: ಎಂ.ಡಿ.ಕೀರ್ತಿಕುಮಾರ್

"ಮುಂಜಾನೆಯ ಮೆರಗು"

ಜಗಳೂರು ನ, 01– ಕನ್ನಡ ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಬಗ್ಗೆ ಕೇವಲ ಹಬ್ಬ–ಹರಿದಿನಗಳಲ್ಲಿ ಆಚರಣೆ ಮಾಡುವ ಮೂಲಕ ಅಭಿಮಾನ ತೋರಿಸುವುದಷ್ಟೇ ಸಾಲದು. ಕನ್ನಡ ಭಾಷೆಯನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಬದುಕಿನಲ್ಲಿ ಅಳವಡಿಸಿಕೊಂಡು, ಬಳಕೆ ಮಾಡುವ ಮೂಲಕ ಭಾಷೆಯ ಉಳಿವು ಮತ್ತು ಬೆಳವಣಿಗೆಗೆ ಶ್ರಮಿಸಬೇಕು ಎಂದು ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ.ಕೀರ್ತಿಕುಮಾರ್ ಹೇಳಿದರು.

ತಾಲೂಕಿನ ಬುಳ್ಳೇನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ಶ್ರೀಮಂತ ಸಾಹಿತ್ಯ, ಸಾಂಸ್ಕೃತಿಕ ಪರಂಪರೆ ಹಾಗೂ ವಿಶಿಷ್ಟವಾದ ನೆಲೆಗಟ್ಟಿದೆ. ಕನ್ನಡಿಗರಾದ ನಾವು ನಮ್ಮ ಮಾತೃಭಾಷೆಯ



ಬಗ್ಗೆ ಹೆಮ್ಮೆ ಹೊಂದುವುದರ ಜತೆಗೆ ಭಾಷೆಯ ಗೌರವವನ್ನು ಪ್ರತಿಯೊಂದು ಕ್ಷೇತ್ರದಲ್ಲೂ ಎತ್ತಿಹಿಡಿಯಬೇಕು ಎಂದರು.

ಕನ್ನಡ ರಾಜ್ಯೋತ್ಸವವೆಂದರೆ ಕೇವಲ ಧ್ವಜಾರೋಹಣ, ಸಿಹಿ ಹಂಚಿಕೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸೀಮಿತವಾಗಬಾರದು. ಕನ್ನಡ ಭಾಷೆಯ ಬಳಕೆಗೆ ಆದ್ಯತೆ ನೀಡುವುದು, ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವುದು, ಮಕ್ಕಳಲ್ಲಿ ಮಾತೃಭಾಷೆಯ ಅಭಿಮಾನ ಬೆಳೆಸುವುದು ಹಾಗೂ ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಭಾಷೆಯ ಮೇಲಿನ ಪ್ರೀತಿ ನಮ್ಮ ನಡೆ–ನುಡಿ ಮತ್ತು ಕಾರ್ಯಗಳಲ್ಲಿ ಪ್ರತಿಬಿಂಬಿಸಬೇಕು ಎಂದು ತಿಳಿಸಿದರು.

ಮಹರ್ಷಿ ವಾಲ್ಮೀಕಿಯವರು ರಾಮಾಯಣ ಮಹಾಕಾವ್ಯದ ಮೂಲಕ ಜಗತ್ತಿಗೆ ಮಾನವೀಯತೆ, ಸತ್ಯ, ಧರ್ಮ, ನ್ಯಾಯ ಹಾಗೂ ಆದರ್ಶ ಬದುಕಿನ ಮೌಲ್ಯಗಳನ್ನು ಸಾರಿದ್ದಾರೆ. ಅವರ ವಿಚಾರಧಾರೆಗಳು ಸಮಾಜಕ್ಕೆ ಸದಾ ದಾರಿದೀಪವಾಗಿವೆ. ವಾಲ್ಮೀಕಿ ಜಯಂತಿ ಆಚರಣೆಯ ಉದ್ದೇಶ ಅವರ ಆದರ್ಶಗಳನ್ನು ಸ್ಮರಿಸುವುದರ ಜತೆಗೆ ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದಾಗಿದೆ ಎಂದರು.

ನಾಡು, ನುಡಿ ಮತ್ತು ಸಮಾಜದ ಏಳಿಗೆಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು. ಜಾತಿ, ಧರ್ಮದ ಭೇದಭಾವ ಮರೆತು ಪರಸ್ಪರ ಸಹೋದರತ್ವ, ಸಾಮರಸ್ಯ ಮತ್ತು ಒಗ್ಗಟ್ಟಿನಿಂದ ಬದುಕುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬುಳ್ಳೇನಹಳ್ಳಿ ಗ್ರಾಮದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕೆ.ಎಂ. ಸುರೇಶ್ ಅವರನ್ನು ಸನ್ಮಾನಿಸಿ ಅಭಿನಂದಿಸಿದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ


"ಮುಂಜಾನೆಯ ಮೆರಗು"



ಜಗಳೂರು ನ, 01– ಆಗ್ನೇಯ ಪದವೀಧರ ಕ್ಷೇತ್ರದ 2026ನೇ ಸಾಲಿನ ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಗೆಲುವು ಸಾಧಿಸಿದ ಕೆ.ಎಂ. ಸುರೇಶ್ ಅವರನ್ನು ಜಗಳೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು ಭೇಟಿಯಾಗಿ ಹೃತ್ಪೂರ್ವಕವಾಗಿ ಸನ್ಮಾನಿಸಿ ಅಭಿನಂದಿಸಿದರು.

ಇಂದು ಸೋಮೇಶ್ವರ ವಿದ್ಯಾಸಂಸ್ಥೆಯಲ್ಲಿ ಕೆ.ಎಂ. ಸುರೇಶ್ ಅವರನ್ನು ಭೇಟಿಯಾದ ಮಾಜಿ ಶಾಸಕ ಎಸ್.ವಿ. ರಾಮಚಂದ್ರ ಅವರು, ಚುನಾವಣೆಯಲ್ಲಿ ಜಯಗಳಿಸಿರುವುದು ಸಂತಸದ ಸಂಗತಿಯಾಗಿದ್ದು, ಅವರ ಮುಂದಿನ ರಾಜಕೀಯ ಹಾಗೂ ಸಾರ್ವಜನಿಕ ಜೀವನಕ್ಕೆ ಮತ್ತಷ್ಟು ಶಕ್ತಿ ತುಂಬಲಿ ಎಂದು ಶುಭ ಹಾರೈಸಿದರು.

ಪದವೀಧರ ಕ್ಷೇತ್ರದ ಮತದಾರರು ತಮ್ಮ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ತಕ್ಕಂತೆ ಕಾರ್ಯನಿರ್ವಹಿಸಿ, ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಮತ್ತು ಜನಸೇವೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಹಾರೈಸಿದರು.



"ಮುಂಜಾನೆಯ ಮೆರಗು"

ಜಗಳೂರು, ನ, 01– ಪಟ್ಟಣದ ಬಯಲು ರಂಗಮಂದಿರ ಆವರಣದಲ್ಲಿ ನಡೆದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಬಿಳಿಚೋಡು ಗ್ರಾ.ಪಂ ಬಿಲ್ ಕಲೆಕ್ಟರ್ ಶಿವಪ್ಪ ಆತ್ಮಹತ್ಯೆಗೆ ಶರಣಾಗಿದ್ದ ಹಿನ್ನೆಲೆ ಅವರ ಪುತ್ರ ಅಶೋಕ ಅವರಿಗೆ ನಿಯಮಾನುಸಾರ ಬಿಲ್ ಕಲೆಕ್ಟರ್ ಹುದ್ದೆಗೆ ನೇಮಕಾತಿ ಆದೇಶವನ್ನು ಶಾಸಕ ಬಿ.ದೇವೇಂದ್ರಪ್ಪ ಅವರು ವಿತರಿಸಿದರು.

ಕನ್ನಡ ಭಾಷೆಯನ್ನು ಪ್ರತಿಯೊಬ್ಬರೂ ಪ್ರೀತಿಸಿ ಬೆಳೆಸಬೇಕು: ಅಮರೇಶ್

"ಮುಂಜಾನೆಯ ಮೆರಗು"

ಜಗಳೂರು ನ, 01– ಕನ್ನಡ ಭಾಷೆಗೆ ಜ್ಞಾನಪೀಠ ಪ್ರಶಸ್ತಿಗಳ ಮುಕುಟ ದೊರೆತಿದ್ದು, ಸಾವಿರಾರು ವರ್ಷಗಳ ಸುದೀರ್ಘ ಇತಿಹಾಸ ಮತ್ತು ಶ್ರೀಮಂತ ಪರಂಪರೆಯನ್ನು ಹೊಂದಿದೆ. ಇಂತಹ ಹೆಮ್ಮೆಯ ಕನ್ನಡ ಭಾಷೆಯನ್ನು ಪ್ರತಿಯೊಬ್ಬರೂ ಪ್ರೀತಿಸಿ, ಗೌರವಿಸಿ, ಉಳಿಸಿ ಬೆಳೆಸಬೇಕು ಎಂದು ತಾಲೂಕಿನ ಮೇದಗಿನಕೆರೆ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲ ಅಮರೇಶ್ ಹೇಳಿದರು.

ತಾಲೂಕಿನ ಮೇದಗಿನಕೆರೆ ಮುರಾರ್ಜಿ ವಸತಿ ಶಾಲೆಯಲ್ಲಿ ಭಾನುವಾರ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ ನಮ್ಮ ನಾಡಿನ ಅಸ್ಮಿತೆ ಹಾಗೂ ಸಂಸ್ಕೃತಿಯ ಪ್ರತೀಕವಾಗಿದೆ. ಕನ್ನಡಿಗರಾದ ನಾವು ನಿತ್ಯ ಜೀವನದಲ್ಲಿ ಕನ್ನಡವನ್ನು ಬಳಸುವ ಮೂಲಕ ಭಾಷೆಯ ಗೌರವವನ್ನು ಹೆಚ್ಚಿಸಬೇಕು. ಕೇವಲ ರಾಜ್ಯೋತ್ಸವದ ಆಚರಣೆಗೆ ಸೀಮಿತವಾಗದೆ, ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಂಡು ಮುಂದಿನ ಪೀಳಿಗೆಗೂ ಕನ್ನಡದ ಶ್ರೀಮಂತ ಪರಂಪರೆಯನ್ನು ಪರಿಚಯಿಸಬೇಕು ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನ್ನಡ ಭಾಷೆ ನಮ್ಮ ಹೆಮ್ಮೆ, ಅಸ್ಮಿತೆಯ ಪ್ರತೀಕ: ಕೆ.ಪಿ. ಪಾಲಯ್ಯ

"ಮುಂಜಾನೆಯ ಮೆರಗು"

ಜಗಳೂರು, ನ, 01– ಕನ್ನಡ ಭಾಷೆ ನಮ್ಮ ಹೆಮ್ಮೆ, ನಮ್ಮ ಅಸ್ಮಿತೆ ಹಾಗೂ ಶ್ರೀಮಂತ ಸಂಸ್ಕೃತಿಯ ಪ್ರತೀಕವಾಗಿದ್ದು, ಕನ್ನಡ ನಾಡು, ನುಡಿ, ನೆಲ ಮತ್ತು ಜಲದ ರಕ್ಷಣೆಗೆ ಪ್ರತಿಯೊಬ್ಬ ಕನ್ನಡಿಗರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಕೆಪಿಸಿಸಿ ಎಸ್ಟಿ ವಿಭಾಗದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ಕರೆ ನೀಡಿದರು.

ಪಟ್ಟಣದ ಭುವನೇಶ್ವರಿ ವೃತ್ತದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸ ಮತ್ತು ಶ್ರೀಮಂತ ಸಾಹಿತ್ಯ ಪರಂಪರೆಯಿದೆ. ಇಂತಹ ವೈಭವಯುತ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ. ಕನ್ನಡದ ಇತಿಹಾಸ, ಪರಂಪರೆ, ಸಾಹಿತ್ಯ ಹಾಗೂ ಸಂಸ್ಕೃತಿಯ ಮಹತ್ವವನ್ನು ಇಂದಿನ ಯುವಜನತೆ ಮತ್ತು ಮುಂದಿನ ಪೀಳಿಗೆಗೆ ಪರಿಚಯಿಸಬೇಕು. ಕನ್ನಡ ಭಾಷೆಯ ಮೇಲಿನ ಅಭಿಮಾನ ಕೇವಲ ರಾಜ್ಯೋತ್ಸವದ ಆಚರಣೆಗೆ ಸೀಮಿತವಾಗದೆ, ದೈನಂದಿನ ಬದುಕಿನಲ್ಲೂ ಕನ್ನಡವನ್ನು ಬಳಸುವ ಮೂಲಕ ಭಾಷೆಯ ಬೆಳವಣಿಗೆಗೆ ಕೊಡುಗೆ ನೀಡಬೇಕು ಎಂದರು.



ಕನ್ನಡಿಗರೆಲ್ಲರೂ ಭಾಷೆ, ನೆಲ, ಜಲದ ವಿಚಾರದಲ್ಲಿ ಒಗ್ಗಟ್ಟಿನಿಂದ ಹೋರಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಕನ್ನಡದ ಕೀರ್ತಿಯನ್ನು ವಿಶ್ವದಾದ್ಯಂತ ಪಸರಿಸುವ ಸಂಕಲ್ಪ ಮಾಡೋಣ ಎಂದು ರಾಜ್ಯೋತ್ಸವದ ಶುಭಾಶಯಗಳನ್ನು ತಿಳಿಸಿದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಕನ್ನಡ ಭಾಷಾಭಿಮಾನ ನಿತ್ಯದ ಉಸಿರಾಗಲಿ: ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಕರೆ

"ಮುಂಜಾನೆಯ ಮೆರಗು"

ದಾವಣಗೆರೆ, ನ, 01– ಕನ್ನಡ ಭಾಷಾಭಿಮಾನವು ಕೇವಲ ನವೆಂಬರ್ ತಿಂಗಳ ಆಚರಣೆಗೆ ಸೀಮಿತವಾಗದೆ, ಪ್ರತಿಯೊಬ್ಬರ ನಿತ್ಯದ ಉಸಿರಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎಸ್. ಎಸ್. ಮಲ್ಲಿಕಾರ್ಜುನ್ ಅವರು ಕರೆ ನೀಡಿದರು.

ಅವರು ಭಾನುವಾರ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜಾರೋಹಣ ನೇರವೇರಿಸಿ ಮಾತನಾಡಿದರು.

1956ರ ನವೆಂಬರ್ 1 ರಂದು ಮುಂಬೈ, ಮದ್ರಾಸ್, ಹೈದರಾಬಾದ್ ಹಾಗೂ ಮೈಸೂರು ಪ್ರಾಂತ್ಯಗಳಲ್ಲಿ ಹಂಚಿಹೋಗಿದ್ದ ಕನ್ನಡ ನೆಲ ಒಂದಾದ ಐತಿಹಾಸಿಕ ಕ್ಷಣವನ್ನು ಹಾಗೂ ಆಲೂರು ವೆಂಕಟರಾಯರು, ಕೆಂಗಲ್ ಹನುಮಂತಯ್ಯ, ಎಸ್. ನಿಜಲಿಂಗಪ್ಪ ಮುಂತಾದ ಮಹನೀಯರ ಹೋರಾಟವನ್ನು ಅವರು ಸ್ಮರಿಸಿದರು. ನಮ್ಮ ನಾಡಿಗೆ ಎರಡು ಸಾವಿರ ವರ್ಷಗಳ ಸಾಹಿತ್ಯಿಕ, ಐತಿಹಾಸಿಕ ಮತ್ತು ಸಾಂಸ್ಕೃತಿಕ ಪರಂಪರೆಯಿದೆ ಎಂದು ಅವರು ಕೊಂಡಾಡಿದರು.

'ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು' ಎಂಬ ಧ್ಯೇಯದೊಂದಿಗೆ ಸರ್ಕಾರ ಜಾರಿಗೆ ತಂದಿರುವ



ಪಂಚ ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರಿಗೆ ಸಾಮಾಜಿಕ ಹಾಗೂ ಆರ್ಥಿಕ ಬಲ ತುಂಬುತ್ತಿವೆ. ಇದೇ ವೇಳೆ, ಪ್ರಸ್ತುತ ಬರಗಾಲದ ಸಂದರ್ಭದಲ್ಲೂ ರೈತರ ನೆರವಿಗೆ ರಾಜ್ಯ ಸರ್ಕಾರ ಸದಾ ಸಿದ್ಧವಿದೆ ಎಂಬ ಭರವಸೆ ನೀಡಿದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ 2022 ರ ಪ್ರಕಾರ ಜಿಲ್ಲೆಯಲ್ಲಿ ನಾಮಫಲಕಗಳಲ್ಲಿ ಶೇ. 60–40 ನಿಯಮ ಪಾಲಿಸದ 32 ವಾಣಿಜ್ಯ ಸಂಸ್ಥೆಗಳಿಂದ 48 ಸಾವಿರ ದಂಡವಸೂಲಿ ಮಾಡಲಾಗಿದ್ದು, ಕಾಯ್ದೆಯನ್ನು ಸಮರ್ಪಕವಾಗಿ ಜಾರಿಗೊಳಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಜೊತೆಗೆ, ಕೈಗಾರಿಕಾ ವಿಕೇಂದ್ರೀಕರಣದ ಮೂಲಕ ದಾವಣಗೆರೆಗೆ ಐಟಿ–ಬಿಟಿ ಮತ್ತು ಇತರ ಉದ್ದಿಮೆಗಳನ್ನು ತಂದು ಸ್ಥಳೀಯವಾಗಿ ಯುವಜನತೆಗೆ ಉದ್ಯೋಗಾವಕಾಶ ಸೃಷ್ಟಿಸಲು ಪ್ರಾಮಾಣಿಕ ಪ್ರಯತ್ನ ನಡೆಯುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ, ಸಮಾಜ ಸೇವೆಯನ್ನು ಪರಿಗಣಿಸಿ ರಾಜ್ಯ ಸರ್ಕಾರ ನೀಡುವ ಪ್ರತಿಷ್ಠಿತ 'ರಾಜ್ಯೋತ್ಸವ ಪ್ರಶಸ್ತಿ'ಗೆ ಆಯ್ಕೆಯಾದ ದಾವಣಗೆರೆಯ ಹೆಸರಾಂತ ವೈದ್ಯರಾದ ಡಾ. ಎಸ್. ಎಂ. ಎಲಿ ಅವರಿಗೆ ಸಚಿವರು ಜಿಲ್ಲೆಯ ನಾಗರಿಕರ ಪರವಾಗಿ ಹಾಗೂ ವೈಯಕ್ತಿಕವಾಗಿ ಅಭಿನಂದನೆಗಳನ್ನು ಸಲ್ಲಿಸಿದರು.

ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯಲ್ಲಿ ನಾಡು–ನುಡಿಗಾಗಿ ಸೇವೆ ಸಲ್ಲಿಸಿದ ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು , ಪ್ರಶಸ್ತಿ ವಿಜೇತರ ವಿವರಗಳು:

1.ಬಸವರಾಜ, ನ್ಯಾಮತಿ–ರಂಗಭೂಮಿ 2 ಜಿ. ಮುರಿಗಪ್ಪಗೌಡ–ಹೊನ್ನಾಳಿ–ಸಾಹಿತ್ಯ 3.ಬಿ.ಹೆಚ್. ಅಂಜಿನಪ್ಪ, ಬಂಜಿಘಟ್ಟ–ಜಗಳೂರು–ಬಹುಜನ 4.ಮಾನಾಚಾರಿ ಕೆ., ಸೊರಟೂರು, ಹೊನ್ನಾಳಿ ಹಿಂದುಸ್ತಾನಿ ಸಂಗೀತ 5.ಕೋಟ್ರಪ್ಪ, ಹರಿಹರ ಡೋಳುಕುಣಿತ (ಜಾನಪದ) 6.ರಮಾಬಾಯಿ ಕಮಲಾಕರ್ , ದಾವಣಗೆರೆ – ಸಂಗೀತ 7.ಬಿ. ತಿರುಕಪ್ಪ, ದಾವಣಗೆರೆ –ಕನ್ನಡ ಪರ ಹೋರಾಟಗಾರರು 8.ಪಿ. ಜಯರಾಮನ್–ದಾವಣಗೆರೆ–ಕ್ರೀಡೆ 9.ಬಾ.ರಾ. ಮಹೇಶ್, ಚನ್ನಗಿರಿ–ಪತ್ರಿಕೋದ್ಯಮ 10.ಎ.ಕೆ. ಓಬಪ್ಪ, ಜಗಳೂರು ಸಂಕೀರ್ಣ 11. ಕುಮಾರ್, ದಾವಣಗೆರೆ –ಛಾಯಾ ಗ್ರಹಣ 12.ಹೆಚ್. ಎನ್. ಶಿವಕುಮಾರಸ್ವಾಮಿ,ಚನ್ನಗಿರಿ–ತಬಲ 13. ಬೆನಕನಹಳ್ಳಿ ಶೇಖರಗೌಡ, ಹೊನ್ನಾಳಿ– ಮಾಧ್ಯಮ 4.ಗೀತಾ ಚಂದ್ರಶೇಖರ, ದಾವಣಗೆರೆ–ಸಮಾಜ ಸೇವೆ 15.ಬಾಳಪ್ಪ ಹೆಚ್, ದಾವಣಗೆರೆ–ಜಾನಪದ 16.ಮಂಜುನಾಥ ಬಿ. ದಾವಣಗೆರೆ–ಛಾಯಾ ಗ್ರಹಣ 17.ಜಿ. ಮುದ್ದುವೀರಸ್ವಾಮಿ ದಾವಣಗೆರೆ–ಸಾಹಿತ್ಯ 18.ರವಿಕುಮಾರ್ ಕೆ.ಬಿ., ಹರಿಹರ ವೀರಗಾಸೆ 19. ಶಹನವಾಜ್ ಯು. ಆರ್. ದಾವಣಗೆರೆ ಸಮಾಜ ಸೇವೆ 20.ಜಿ. ಶಂಭುಲಿಂಗಪ್ಪ, ದಾವಣಗೆರೆ–ಸಂಗೀತ 21. ಎಸ್.ಎಸ್. ಮಂಜುಶ್ರೀ(ಗೌಡ), ದಾವಣಗೆರೆ ಕನ್ನಡಪರ ಸಂಘಟನೆ 22.ರಮೇಶ್ ಮಾನೆ, ಹರಿಹರ–ಕನ್ನಡ ಪರ



ಹೋರಾಟಗಾರರು. 23.ಸತೀಶ್ ಎಂ.ವೈ. ದಾವಣಗೆರೆ ಮಾಧ್ಯಮ 24.ಶಿವಮೂರ್ತಿ ಆರ್. ಚನ್ನಗಿರಿ–ಸಂಕೀರ್ಣ, 25 ಎಂ.ಆರ್. ಮಾಲತೇಶ್, ಹರಿಹರ–ಜಾನಪದ 26.ಡಿ. ರಂಗನಾಥ್ , ಹರಿಹರ ದಾವಣಗೆರೆ–ಬೀದಿನಾಟಕ 27.ರಮೇಶ್ ಜಹಗೀರ್‌ದಾರ್, ದಾವಣಗೆರೆ–ಮಾಧ್ಯಮ 28.ಎಸ್.ಪಿ. ನಾರಾಯಣರಾವ್ (ಬಾಬುರಾವ್ ಸುತ್ರಾವ್) ದಾವಣಗೆರೆ–ಕನ್ನಡ ಪರ ಹೋರಾಟಗಾರರು 29.ಎಸ್. ಕೋಟೇಶ್, ದಾವಣಗೆರೆ–ಜಾನಪದ 30.ಕೆ.ಎನ್. ಮಲ್ಲಿಕಾರ್ಜುನ ಮೂರ್ತಿ, ದಾವಣಗೆರೆ–ಪತ್ರಕರ್ತರು 31.ಶೇಖರಗೌಡ ಪಾಟೀಲ್, ಹರಿಹರ–ಪತ್ರಕರ್ತರು 32. ಎ.ಎನ್.ನಿಂಗಪ್ಪ, ದಾವಣಗೆರೆ–ಮಾಧ್ಯಮ 33.ಟಿ. ಕರಿಬಸಪ್ಪ ದಾವಣಗೆರೆ–ಸಂಕೀರ್ಣ 34.ವೈ. ಮಲ್ಲೇಶ್ ಶಿಲ್ಪಿ, ದಾವಣಗೆರೆ–ಶಿಲ್ಪಕಲೆ 35.ರಮೇಶ್ ಬಿ., ಹೊನ್ನಾಳಿ–ಸಮಾಜ ಸೇವೆ 36.ಸಲೀಂ ಜಾವೀದ್, ದಾವಣಗೆರೆ–ಮಾಧ್ಯಮ 37. ಗಣೇಶ್‌ಕುಮಾರ್ ದಾವಣಗೆರೆ–ಶಿಲ್ಪಿ 38 ಪುನೀತ್‌ಅಪ್ಪಿ, ದಾವಣಗೆರೆ ಮಾಧ್ಯಮ 39.ಹನುಮಂತರಾವ್ ಬಿ., ದಾವಣಗೆರೆ–ಮಾಧ್ಯಮ 40.ಶಿವ ಕೆ. ಬೆಳಗುತ್ತಿ, ನ್ಯಾಮತಿ, ವಿಜ್ಞಾನ/ತಂತ್ರಜ್ಞಾನ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮರ್ಥ ಶಾಮನೂರು, ದುಡಾ ಅಧ್ಯಕ್ಷರಾದ ದಿನೇಶ್ ಶೆಟ್ಟಿ, ಪೂರ್ವ ವಲಯದ ಪೊಲೀಸ್ ಮಹಾ ನಿರೀಕ್ಷಕರಾದ ಎನ್ ಸತೀಶ್ ಕುಮಾರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ಹೆಚ್.ಟಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಸಾಹಿತ್ಯ ಎಮ್ ಆಲದಕಟ್ಟಿ, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಡಾ.ಎನ್. ಮಹಾಂತೇಶ್ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಕನ್ನಡ ನಾಡು, ನುಡಿ, ನೆಲ, ಜಲದ ಸಂರಕ್ಷಣೆಗೆ ಪ್ರತಿಯೊಬ್ಬರೂ ಬದ್ಧರಾಗಬೇಕು: ಸಚಿವ ಟಿ.ರಘುಮೂರ್ತಿ

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 01– ಕನ್ನಡ ಭಾಷೆ ಕೇವಲ ಸಂವಹನದ ಮಾಧ್ಯಮವಲ್ಲ; ಅದು ನಮ್ಮ ನಾಡಿನ ಸಂಸ್ಕೃತಿ, ಪರಂಪರೆ, ಇತಿಹಾಸ ಹಾಗೂ ಅಸ್ಮಿತೆಯ ಪ್ರತೀಕವಾಗಿದೆ. ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ ಎಂದು ಸಚಿವ ಟಿ.ರಘುಮೂರ್ತಿ ಹೇಳಿದರು.

ನಗರದ ಶ್ರೀ ಮುರುಘರಾಜೇಂದ್ರ ಕ್ರೀಡಾಂಗಣ ಹಾಗೂ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ಭಾಷೆ ಸಾಹಿತ್ಯ, ಕಲೆ ಹಾಗೂ ಸಾಂಸ್ಕೃತಿಕ ಪರಂಪರೆಯಲ್ಲಿ ವಿಶಿಷ್ಟ ಸ್ಥಾನ ಪಡೆದಿದೆ. ಕನ್ನಡ ನಾಡು, ನುಡಿ, ನೆಲ, ಜಲ ಮತ್ತು ಭಾಷೆಯ ಸಂರಕ್ಷಣೆಗೆ ಪ್ರತಿಯೊಬ್ಬರೂ ಬದ್ಧರಾಗಬೇಕು. ಮಾತೃಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳುವುದರ ಜತೆಗೆ ಮುಂದಿನ ಪೀಳಿಗೆಗೂ ಕನ್ನಡದ ಮಹತ್ವ ಮತ್ತು ಅದರ ಶ್ರೀಮಂತ ಪರಂಪರೆಯನ್ನು ಪರಿಚಯಿಸಬೇಕು ಎಂದು ತಿಳಿಸಿದರು.

ಕನ್ನಡ ಭಾಷೆಯ ಬೆಳವಣಿಗೆ ಹಾಗೂ ಸಮಗ್ರ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರು, ಕನ್ನಡಪರ ಸಂಘಟನೆಗಳು ಹಾಗೂ ಎಲ್ಲ ಕನ್ನಡಿಗರು ಒಗ್ಗೂಡಿ ಕೈಜೋಡಿಸಬೇಕು. ರಾಜ್ಯದ ಏಕತೆ, ಸಮಾನತೆ, ಸಹಬಾಳ್ವೆ ಮತ್ತು ಸೌಹಾರ್ದತೆಯ ಆಶಯಗಳನ್ನು ಎತ್ತಿಹಿಡಿಯುವ ಮೂಲಕ ಅಭಿವೃದ್ಧಿ ಹೊಂದಿದ, ಸಮೃದ್ಧ ಹಾಗೂ ಸರ್ವಜನಾಂಗದ ಶಾಂತಿಯ ತೋಟವಾದ



ಕರ್ನಾಟಕ ನಿರ್ಮಾಣಕ್ಕೆ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಜನಪ್ರತಿನಿಧಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವೋಟ್ ಬಚಾವೋ, ದೇಶ್ ಬಚಾವೋ' ಸಮಾವೇಶಕ್ಕೆ ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್ ಭಾಗಿ

"ಮುಂಜಾನೆಯ ಮೆರಗು"

ನವದೆಹಲಿ ನ, 01– ಮತದಾನದ ಹಕ್ಕಿನ ರಕ್ಷಣೆ, ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹಾಗೂ ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವ ಉದ್ದೇಶದಿಂದ ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಆಯೋಜಿಸಿರುವ 'ಚಲೋ ದಿಲ್ಲಿ–ವೋಟ್ ಬಚಾವೋ, ದೇಶ್ ಬಚಾವೋ' ಬೃಹತ್ ಸಮಾವೇಶದಲ್ಲಿ ಭಾಗವಹಿಸಲು ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್ ಅವರು ದೇಶದ ವಿವಿಧ ರಾಜ್ಯಗಳ ಸಂಸದರೊಂದಿಗೆ ಪ್ರಯಾಣ ಬೆಳೆಸಿದರು.



ನವದೆಹಲಿಯ ಸಂವಿಧಾನ ಕ್ಲಬ್‌ನಲ್ಲಿ ವಿವಿಧ ರಾಜ್ಯಗಳ ಸಂಸದರನ್ನು ಭೇಟಿಯಾದ ಬಳಿಕ, 'ವೋಟ್ ಬಚಾವೋ, ದೇಶ್ ಬಚಾವೋ' ಘೋಷಣೆಯೊಂದಿಗೆ ಬಸ್ ಮೂಲಕ ಐತಿಹಾಸಿಕ ರಾಮಲೀಲಾ ಮೈದಾನದತ್ತ ತೆರಳಿದರು.

ಈ ಸಮಾವೇಶವು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವುದು, ಸಂವಿಧಾನದ ಆಶಯಗಳನ್ನು ಎತ್ತಿಹಿಡಿಯುವುದು ಹಾಗೂ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕಿನ ರಕ್ಷಣೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ ಎಂದು ತಿಳಿಸಿದರು.

ಮತದಾನದ ಹಕ್ಕು ಪ್ರತಿಯೊಬ್ಬ ಭಾರತೀಯ ಪ್ರಜೆಯ ಸಂವಿಧಾನಬದ್ಧ ಹಕ್ಕಾಗಿದ್ದು, ಪ್ರಜಾಪ್ರಭುತ್ವದ ಅಡಿಪಾಯವಾಗಿರುವ ಸ್ವತಂತ್ರ, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣಾ ವ್ಯವಸ್ಥೆಯನ್ನು ಕಾಪಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂಬ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದರು.

ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಕುರಿತು ವ್ಯಕ್ತವಾಗಿರುವ ಆರೋಪಗಳು, ಮತದಾರರ ಹಕ್ಕುಗಳಿಗೆ ಎದುರಾಗುತ್ತಿರುವ ಸವಾಲುಗಳು ಹಾಗೂ ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆಯ ಬಗ್ಗೆ ಮೂಡಿರುವ ಆತಂಕಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬೇಕಿದೆ ಎಂಬುದು ಸಮಾವೇಶದ ಪ್ರಮುಖ ಆಶಯವಾಗಿದೆ.

ಗಡಿನಾಡು ಬೆಳಗಾವಿಯಲ್ಲಿ ಕನ್ನಡಾಭಿಮಾನದ ಸಂಭ್ರಮ; ಅದ್ದೂರಿಯಾಗಿ ಜರುಗಿದ 71ನೇ ಕನ್ನಡ ರಾಜ್ಯೋತ್ಸವ

ರಾಷ್ಟ್ರಧ್ವಜ, ಕನ್ನಡ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವಕ್ಕೆ ಚಾಲನೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ

"ಮುಂಜಾನೆಯ ಮೆರಗು"

ಬೆಳಗಾವಿ ನ, 01– ಗಡಿನಾಡು ಬೆಳಗಾವಿಯಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಕನ್ನಡಾಭಿಮಾನ, ಸಂಭ್ರಮ ಹಾಗೂ ಸಡಗರದಿಂದ ಅದ್ದೂರಿಯಾಗಿ ಆಚರಿಸಲಾಯಿತು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ರಾಷ್ಟ್ರಧ್ವಜ ಹಾಗೂ ಕನ್ನಡ ಧ್ವಜಾರೋಹಣ ನೆರವೇರಿಸಿ, ತಾಯಿ ಭುವನೇಶ್ವರಿಗೆ ಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಪೊಲೀಸ್ ಇಲಾಖೆ, ವಿವಿಧ ಭದ್ರತಾ ಪಡೆಗಳು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳಿಂದ ನಡೆದ ಆಕರ್ಷಕ ಪಥಸಂಚಲನವನ್ನು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಿದರು. ಪೊಲೀಸ್ ಪಡೆಗಳ ಶಿಸ್ತುಬದ್ಧ ಪಥಸಂಚಲನ, ಬ್ಯಾಂಡ್ ವಾದನ ಹಾಗೂ ವಿದ್ಯಾರ್ಥಿಗಳ ಆಕರ್ಷಕ ಪ್ರದರ್ಶನಗಳು ಸಮಾರಂಭಕ್ಕೆ ವಿಶೇಷ ಮೆರುಗು ನೀಡಿದವು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಕನ್ನಡ ಭಾಷೆ ಕೇವಲ ಸಂವಹನದ ಮಾಧ್ಯಮವಲ್ಲ. ಅದು ನಮ್ಮ ಅಸ್ಮಿತೆ, ಇತಿಹಾಸ, ಸಂಸ್ಕೃತಿ ಮತ್ತು ಸ್ವಾಭಿಮಾನದ ಪ್ರತೀಕವಾಗಿದೆ. ವಿಶೇಷವಾಗಿ ಗಡಿನಾಡು ಬೆಳಗಾವಿಯಲ್ಲಿ



ಕನ್ನಡ ಭಾಷೆ, ನೆಲ, ಜಲ ಹಾಗೂ ಸಂಸ್ಕೃತಿಯ ರಕ್ಷಣೆಗೆ ಪ್ರತಿಯೊಬ್ಬರೂ ಬದ್ಧರಾಗಿರಬೇಕು ಎಂದು ಕರೆ ನೀಡಿದರು.

ಕನ್ನಡಿಗರ ನಿರಂತರ ಹೋರಾಟ, ತ್ಯಾಗ ಮತ್ತು ಒಗ್ಗಟ್ಟಿನ ಫಲವಾಗಿ ಕರ್ನಾಟಕ ಏಕೀಕರಣದ ಕನಸು ನನಸಾಗಿದೆ. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಅದು ಪ್ರತಿಯೊಬ್ಬ ಕನ್ನಡಿಗನ ಸಾಮೂಹಿಕ ಹೊಣೆಗಾರಿಕೆಯಾಗಿದೆ. ಮುಂದಿನ ಪೀಳಿಗೆಗೂ ಕನ್ನಡದ ಶ್ರೀಮಂತ ಸಾಹಿತ್ಯ, ಸಂಸ್ಕೃತಿ ಮತ್ತು ಪರಂಪರೆಯನ್ನು ಪರಿಚಯಿಸುವ ಕೆಲಸವಾಗಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶಿಕ್ಷಣ, ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಸಮಾಜಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿರುವ ಸಾಧಕರನ್ನು ಗುರುತಿಸಿ ಸನ್ಮಾನಿಸುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ತಿಳಿಸಿದರು.

ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಬೆಳಗಾವಿ ನಗರದಾದ್ಯಂತ ಕನ್ನಡದ ಕೆಂಪು–ಹಳದಿ ಧ್ವಜಗಳು ರಾರಾಜಿಸಿದವು. ಕನ್ನಡಪರ ಘೋಷಣೆಗಳು, ಕನ್ನಡಾಭಿಮಾನಿಗಳ ಸಂಭ್ರಮ ಹಾಗೂ ರಾಜ್ಯೋತ್ಸವದ ಸಡಗರ ಗಡಿನಾಡಿನಲ್ಲಿ ಕನ್ನಡ ಪ್ರೇಮದ ವಾತಾವರಣವನ್ನು ಮೂಡಿಸಿತು. ಗಡಿಭಾಗದಲ್ಲಿಯೂ ಕನ್ನಡದ ಅಸ್ಮಿತೆ ಮತ್ತು ಭಾಷಾಭಿಮಾನವನ್ನು



ಎತ್ತಿಹಿಡಿಯುವ ಸಂಕಲ್ಪ ಈ ಆಚರಣೆಯಲ್ಲಿ ಪ್ರತಿಧ್ವನಿಸಿತು.

ಕಾರ್ಯಕ್ರಮದಲ್ಲಿ ಶಾಸಕ ಆಸಿಫ್ (ರಾಜು) ಸೇಠ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಉತ್ತರ ವಲಯ ಪೊಲೀಸ್ ಮಹಾನಿರೀಕ್ಷಕ ಸಂದೀಪ್ ಪಾಟೀಲ, ನಗರ ಪೊಲೀಸ್ ಆಯುಕ್ತ ನಿಕ್ಕಂ ಪ್ರಕಾಶ್ ಅಮೃತ್, ಪ್ರಾದೇಶಿಕ ಆಯುಕ್ತೆ ಕೆ.ಎಂ. ಜಾನಕಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಕನ್ನಡಪರ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಆರು ವರ್ಷಗಳಿಂದ ನಾಪತ್ತೆಯಾದ ಮಸಾಲೆ ವ್ಯಾಪಾರಿ ರಾಮಪ್ಪ: ಪತ್ತೆಗಾಗಿ ಪೊಲೀಸರಿಂದ ತನಿಖೆ

"ಮುಂಜಾನೆಯ ಮೆರಗು"

ಜಗಳೂರು ನ, 01– ತಾಲೂಕಿನ ಗಿಡ್ಡನಕಟ್ಟೆ ಗ್ರಾಮದ ರಾಮಪ್ಪ ತಂದೆ ಲೇಟ್ ಹನುಮಂತಪ್ಪ ಎಂಬುವವರು ಸುಮಾರು ಆರು ವರ್ಷಗಳಿಂದ ನಾಪತ್ತೆಯಾಗಿದ್ದು, ಅವರನ್ನು ಪತ್ತೆಹಚ್ಚಿಕೊಡುವಂತೆ ಪತ್ನಿ ಮಮತಾ ಪೊಲೀಸರಿಗೆ ದೂರು ನೀಡಿದ್ದಾರೆ.



ರಾಮಪ್ಪ ಅವರು ಸುಮಾರು ಆರು

ಮೈಸೂರು ಅರಮನೆ ಆವರಣದಲ್ಲಿ ಕನ್ನಡಿಗರ ಹೆಮ್ಮೆಯ ಮೆರವಣಿಗೆಗೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ



"ಮುಂಜಾನೆಯ ಮೆರಗು"

ಮೈಸೂರು ನ, 01– ಕನ್ನಡ ರಾಜ್ಯೋತ್ಸವದ ಅಂಗವಾಗಿ ಮೈಸೂರಿನ ಐತಿಹಾಸಿಕ ಅರಮನೆ ಆವರಣದಲ್ಲಿ ನಾಡದೇವತೆ ತಾಯಿ ಭುವನೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿ, ಕನ್ನಡಿಗರ ಹೆಮ್ಮೆಯ ಮೆರವಣಿಗೆಗೆ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕನ್ನಡ ನಾಡು, ನುಡಿ, ನೆಲ, ಜಲ ಹಾಗೂ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಕನ್ನಡ ಭಾಷೆಯ ಉಳಿವು ಮತ್ತು ನಾಡಿನ ಸಮಗ್ರ ಬೆಳವಣಿಗೆಗಾಗಿ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು. ಕನ್ನಡದ ಅಸ್ಮಿತೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಎತ್ತಿಹಿಡಿಯುವ ಮೂಲಕ ಕರ್ನಾಟಕದ ಕೀರ್ತಿ ಮತ್ತು ಹಿರಿಮೆಯನ್ನು ವಿಶ್ವದ ಮೂಲೆಮೂಲೆಗೂ ಪಸರಿಸಬೇಕು ಎಂದು ಕರೆ ನೀಡಿದರು.

ಐತಿಹಾಸಿಕ ಮೈಸೂರು ಅರಮನೆ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಗಣ್ಯರು ಭಾಗವಹಿಸಿದ್ದರು. ಜಿಲ್ಲಾಧಿಕಾರಿ ಜೆ. ಲಕ್ಷ್ಮೀಕಾಂತ ರೆಡ್ಡಿ, ಮೈಸೂರು ನಗರ ಪೊಲೀಸ್ ಆಯುಕ್ತ ಸೀಮಾ ಲಾಟ್ಕರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಯುಕೇಶ್ ಕುಮಾರ್, ಮೈಸೂರು ಮಹಾನಗರ ಪಾಲಿಕೆ ಆಯುಕ್ತೆ ಎಂ.ಕೆ. ಸವಿತಾ, ಮೈಸೂರು ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಮಣ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಶಿಷ್ಟ ಜಾತಿ, ಪಂಗಡದ ಸಣ್ಣ ಉದ್ಯಮಿಗಳಿಗೆ ಮೊಬೈಲ್ ಕ್ಯಾಂಟೀನ್ ವಿತರಣೆ: ಸಚಿವ ಮಧು ಬಂಗಾರಪ್ಪ



"ಮುಂಜಾನೆಯ ಮೆರಗು"

ಶಿವಮೊಗ್ಗ ನ, 01– ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮದಾರರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆ ಜಾರಿಗೊಳಿಸಿರುವ ವಿಶೇಷ ಯೋಜನೆಯಡಿ ಫಲಾನುಭವಿಗಳಿಗೆ ಮೊಬೈಲ್ ಕ್ಯಾಂಟೀನ್ ವಾಹನಗಳನ್ನು ಸಚಿವ ಮಧು ಬಂಗಾರಪ್ಪ ವಿತರಿಸಿದರು.

ಪ್ರವಾಸೋದ್ಯಮ ಇಲಾಖೆಯು ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಉದ್ಯಮಶೀಲತೆಯನ್ನು ಉತ್ತೇಜಿಸಲು ಒಂದು ತಿಂಗಳ ಉದ್ಯಮಶೀಲತಾ ತರಬೇತಿ ನೀಡುತ್ತಿದೆ. ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಸ್ವಂತ ಉದ್ಯಮ ಆರಂಭಿಸಲು ಅನುಕೂಲವಾಗುವಂತೆ ಮೊಬೈಲ್ ಕ್ಯಾಂಟೀನ್ ವಾಹನಗಳನ್ನು ಒದಗಿಸಲಾಗುತ್ತಿದೆ.

ಈ ಯೋಜನೆಯಡಿ ಮೊಬೈಲ್ ಕ್ಯಾಂಟೀನ್ ವಾಹನ ಖರೀದಿಸಲು ಇಲಾಖೆಯಿಂದ ಘಟಕ ವೆಚ್ಚದ ಶೇ.70ರಷ್ಟು ಸಹಾಯಧನ ನೀಡಲಾಗುತ್ತಿದ್ದು, ಗರಿಷ್ಠ 5 ಲಕ್ಷದವರೆಗೆ ಆರ್ಥಿಕ ನೆರವು ಕಲ್ಪಿಸಲಾಗುತ್ತಿದೆ. ಇದರಿಂದ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳ ಯುವಜನರು ಸ್ವಂತ ಉದ್ಯಮ ಆರಂಭಿಸಿ ಸ್ವಾವಲಂಬಿ ಜೀವನ ರೂಪಿಸಿಕೊಳ್ಳಲು ಅವಕಾಶ ದೊರೆಯಲಿದೆ.

ಉದ್ಯೋಗ ಅರಸಿ ಅಲೆಯುವ ಬದಲು ಸ್ವಂತ ಉದ್ಯಮ ಆರಂಭಿಸಿ ಇತರರಿಗೂ ಉದ್ಯೋಗ ನೀಡುವ ಮಟ್ಟಕ್ಕೆ ಫಲಾನುಭವಿಗಳು ಬೆಳೆಯಬೇಕು ಎಂಬ ಆಶಯದೊಂದಿಗೆ ಇಂತಹ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರದ ಸಹಾಯಧನ ಮತ್ತು ತರಬೇತಿಯ ಸದುಪಯೋಗಪಡಿಸಿಕೊಂಡು ಉದ್ಯಮವನ್ನು ಯಶಸ್ವಿಯಾಗಿ ಮುನ್ನಡೆಸುವಂತೆ ಫಲಾನುಭವಿಗಳಿಗೆ ಪ್ರೋತ್ಸಾಹ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ, ಜಿಲ್ಲಾ ರಕ್ಷಣಾಧಿಕಾರಿ ನಿಖಿಲ್ ಬಿ., ಸೂಡಾ ಅಧ್ಯಕ್ಷ ಸಿ.ಜಿ. ಮಧುಸೂದನ್, ಜವಳಿ ನಿಗಮದ ಅಧ್ಯಕ್ಷ ಚೇತನ್ ಗೌಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಇಂದಿನ ಮಕ್ಕಳೇ ಕನ್ನಡದ ವಾರಸುದಾರರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್



"ಮುಂಜಾನೆಯ ಮೆರಗು"

ಬೆಂಗಳೂರು ನ, 01– ಕನ್ನಡ ಭಾಷೆಗೆ 2,000ಕ್ಕೂ ಹೆಚ್ಚು ವರ್ಷಗಳ ಇತಿಹಾಸವಿದ್ದು, ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತಿದೆ. ಎಂಟು ಜ್ಞಾನಪೀಠ ಪ್ರಶಸ್ತಿಗಳ ಗರಿಮೆಯನ್ನು ಹೊಂದಿರುವ ಕನ್ನಡ ಭಾಷೆ ಶ್ರೀಮಂತ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಜಗತ್ತಿಗೆ ಪರಿಚಯಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕನ್ನಡ ಭಾಷೆಯ ಇತಿಹಾಸ ಮತ್ತು ಸಾಹಿತ್ಯ ಪರಂಪರೆಯನ್ನು ಸ್ಮರಿಸಿದ ಅವರು, ಪಂಪ, ರನ್ನ, ಜನ್ನ, ಕುಮಾರವ್ಯಾಸ, ಕನಕದಾಸ, ಪುರಂದರದಾಸ, ಸರ್ವಜ್ಞ ಹಾಗೂ ಬಸವಣ್ಣನವರಂತಹ ಮಹನೀಯರು ಜನಿಸಿದ ನಾಡು ನಮ್ಮದು. ಡಿ.ವಿ.ಜಿ., ಕುವೆಂಪು, ದ.ರಾ. ಬೇಂದ್ರೆ, ಶಿವರಾಮ ಕಾರಂತ, ಗೋಕಾಕ್, ಯು.ಆರ್. ಅನಂತಮೂರ್ತಿ, ತೇಜಸ್ವಿ, ಸಿದ್ದಲಿಂಗಯ್ಯ, ನಿಸಾರ್ ಅಹಮದ್ ಹಾಗೂ ಚಂದ್ರಶೇಖರ ಕಂಬಾರರಂತಹ ದಿಗ್ಗಜ ಸಾಹಿತಿಗಳು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಹೇಳಿದ್ದಾರೆ.

ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂದಿನ ಮಕ್ಕಳೇ ಕನ್ನಡ ಭಾಷೆಯ ನಿಜವಾದ ವಾರಸುದಾರರು ಹಾಗೂ ರಾಯಭಾರಿಗಳು. ಕನ್ನಡ ಎನ್ನುವುದು ಅಮೂಲ್ಯ ಆಭರಣವಿದ್ದಂತೆ. ಆ ಆಭರಣವನ್ನು ನಿಮ್ಮ ಕೈಯಲ್ಲಿ ಇಟ್ಟಿದ್ದು, ಅದರ ಹೊಳಪು ಎಂದಿಗೂ ಕಳೆಯದಂತೆ ಕಾಪಾಡುವ ಜವಾಬ್ದಾರಿ ನಿಮ್ಮ ಮೇಲಿದೆ ಎಂದು ಕಿವಿಮಾತು ಹೇಳಿದ್ದಾರೆ.

ಕನ್ನಡ ಭಾಷೆಯನ್ನು ಕೇವಲ ಪಠ್ಯಪುಸ್ತಕಗಳಿಗೆ ಸೀಮಿತಗೊಳಿಸದೆ ದೈನಂದಿನ ಬದುಕಿನಲ್ಲಿ ಪ್ರೀತಿಯಿಂದ ಬಳಸಬೇಕು. ಕನ್ನಡ ಸಾಹಿತ್ಯವನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ನಮ್ಮ ಭಾಷೆಯ ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯನ್ನು ಅರಿತುಕೊಂಡು ಮುಂದಿನ ಪೀಳಿಗೆಗೂ ಪರಿಚಯಿಸಬೇಕು ಎಂದು ಮಕ್ಕಳಿಗೆ ಕರೆ ನೀಡಿದ್ದಾರೆ.

ಕನ್ನಡ ರಾಜ್ಯೋತ್ಸವ: 16 ಸಾಧಕರಿಗೆ ಪ್ರಶಸ್ತಿ ಪ್ರದಾನ; ಶಾಲಾ ಮಕ್ಕಳಿಗೆ ಸಚಿವ ಕೆ.ಎಚ್.ಮುನಿಯಪ್ಪ ಅವರಿಂದ 35 ಸಾವಿರ ಪ್ರೋತ್ಸಾಹಧನ



"ಮುಂಜಾನೆಯ ಮೆರಗು"

ದೇವನಹಳ್ಳಿ ನ, 01– ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯ ಸಂಭ್ರಮದ 71ನೇ ಕನ್ನಡ ರಾಜ್ಯೋತ್ಸವವನ್ನು ದೇವನಹಳ್ಳಿಯಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಚಿವ ಕೆ.ಎಚ್. ಮುನಿಯಪ್ಪ ಅವರು ಭಾಗವಹಿಸಿ, ತಾಯಿ ಭುವನೇಶ್ವರಿಗೆ ಗೌರವ ನಮನ ಸಲ್ಲಿಸಿ ಧ್ವಜಾರೋಹಣ ನೆರವೇರಿಸಿದರು.

ಕಾರ್ಯಕ್ರಮದ ಅಂಗವಾಗಿ ಪೊಲೀಸ್ ತುಕಡಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಜಿಲ್ಲೆಯ 16 ಸಾಧಕರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶಾಲಾ ಮಕ್ಕಳಿಂದ ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಗಮನ ಸೆಳೆದವು.

ಬೈಚಾಪುರ ಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ವೀರವನಿತೆ ಒನಕೆ ಓಬವ್ವ ಅವರ ಕುರಿತ ನಾಟಕ ಸೇರಿದಂತೆ ಮಕ್ಕಳ ಸಾಂಸ್ಕೃತಿಕ ಪ್ರದರ್ಶನಗಳನ್ನು ಸಚಿವರು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಒನಕೆ ಓಬವ್ವ ನಾಟಕ ತಂಡಕ್ಕೆ 10 ಸಾವಿರ ಹಾಗೂ ಇತರೆ ಐದು ಶಾಲೆಗಳ ಸಾಂಸ್ಕೃತಿಕ ತಂಡಗಳಿಗೆ ತಲಾ 5 ಸಾವಿರದಂತೆ ಒಟ್ಟು 35 ಸಾವಿರ ವೈಯಕ್ತಿಕ ಪ್ರೋತ್ಸಾಹಧನ ನೀಡಿದರು.

ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಇಂತಹ ಸಾಂಸ್ಕೃತಿಕ ವೇದಿಕೆಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ಸೃಜನಶೀಲತೆ ಹಾಗೂ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಮೇಲಿನ ಅಭಿಮಾನವನ್ನು ಹೆಚ್ಚಿಸುತ್ತವೆ ಎಂದು ಸಚಿವರು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಗ್ರಾಮಾನುಭವ ಬಸ್ ಕಾರ್ಯಕ್ರಮಕ್ಕೆ ಸಚಿವರು ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಕೆ. ಎನ್.ಅನುರಾಧ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ವಾಸಂತಿ ಅಮರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಎಂ.ವಿ., ಅಪರ ಜಿಲ್ಲಾಧಿಕಾರಿ ರಂಗನಾಥ್ ಸೇರಿದಂತೆ ಜನಪ್ರತಿನಿಧಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

ಹಕ್ಕಿಪಿಕ್ಕಿ ಆಶ್ರಮ ಶಾಲೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಆಹಾರ, ಶುದ್ಧ ಕುಡಿಯುವ ನೀರು ಒದಗಿಸಲು ಸಚಿವ ಟಿ.ರಘುಮೂರ್ತಿ ಸೂಚನೆ



"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 01– ಪರಿಶಿಷ್ಟ ಪಂಗಡಗಳ ಜನರ ಹಿತಾಸಕ್ತಿಗಳನ್ನು ಕಾಪಾಡುವುದು ಸರ್ಕಾರದ ಕರ್ತವ್ಯವಾಗಿದ್ದು, ಅವರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜತೆಗೆ ಅಗತ್ಯ ಮೂಲಸೌಕರ್ಯ ಮತ್ತು ಉತ್ತಮ ವಸತಿ ಸೌಲಭ್ಯಗಳನ್ನು ಕಲ್ಪಿಸುವುದು ಮುಖ್ಯವಾಗಿದೆ ಎಂದು ಸಚಿವ ಟಿ.ರಘುಮೂರ್ತಿ ಹೇಳಿದರು.

ಸದಾಶಿವಪುರ ವ್ಯಾಪ್ತಿಯ ಹಕ್ಕಿಪಿಕ್ಕಿ ಕ್ಯಾಂಪ್‌ನ ಆಶ್ರಮ ಶಾಲೆಗೆ ಭೇಟಿ ನೀಡಿ, ಶಾಲೆಯಲ್ಲಿನ ಪ್ರಸ್ತುತ ಸ್ಥಿತಿಗತಿ, ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳು, ಸ್ವಚ್ಛತೆ ಹಾಗೂ ನಿರ್ವಹಣಾ ವ್ಯವಸ್ಥೆಯನ್ನು ಪರಿಶೀಲಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲ ಗಿರೀಶ್ ಅವರಿಂದ ಶಾಲೆಯ ಕಾರ್ಯನಿರ್ವಹಣೆ, ವಿದ್ಯಾರ್ಥಿಗಳ ಹಾಜರಾತಿ, ಬೋಧನಾ ವಿಧಾನ ಮತ್ತು ಶೈಕ್ಷಣಿಕ ಪ್ರಗತಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಚಿವರು ಮಾಹಿತಿ ಪಡೆದುಕೊಂಡರು. ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುವ ಮಧ್ಯಾಹ್ನದ ಊಟದ ಗುಣಮಟ್ಟದ ಬಗ್ಗೆಯೂ ವಿಚಾರಿಸಿದರು.

ಮಕ್ಕಳಿಗೆ ರುಚಿಕರವಾದ ಹಾಗೂ ಪೌಷ್ಟಿಕಾಂಶಯುಕ್ತ ಆಹಾರವನ್ನು ಸಂಪೂರ್ಣ ಸ್ವಚ್ಛತೆಯೊಂದಿಗೆ ಸಿದ್ಧಪಡಿಸಿ ವಿತರಿಸಬೇಕು. ಆಹಾರ ತಯಾರಿಸುವ ಸ್ಥಳ ಮತ್ತು ಊಟದ ವ್ಯವಸ್ಥೆಯಲ್ಲಿ ನೈರ್ಮಲ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಅಲ್ಲದೆ, ವಿದ್ಯಾರ್ಥಿಗಳಿಗೆ ನಿರಂತರವಾಗಿ ಶುದ್ಧ ಕುಡಿಯುವ ನೀರು ಪೂರೈಸಬೇಕು. ಶಾಲೆಯ ಆವರಣ, ತರಗತಿ ಕೊಠಡಿಗಳು, ವಿದ್ಯಾರ್ಥಿಗಳ ವಸತಿ ಕೊಠಡಿಗಳು ಹಾಗೂ ಶೌಚಾಲಯಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಪ್ರಾಂಶುಪಾಲರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶಾಲಾ ಪರಿಸರವು ಮಕ್ಕಳ ಕಲಿಕೆ ಮತ್ತು ಆರೋಗ್ಯಕರ ಬೆಳವಣಿಗೆಗೆ ಪೂರಕವಾಗಿರಬೇಕು. ಸ್ವಚ್ಛ, ಸುಂದರ ಹಾಗೂ ಆರೋಗ್ಯಕರ ವಾತಾವರಣ ನಿರ್ಮಿಸುವ ಮೂಲಕ ವಿದ್ಯಾರ್ಥಿಗಳಿಗೆ ಉತ್ತಮ ಸೌಲಭ್ಯ ಕಲ್ಪಿಸಬೇಕು. ಶಾಲೆಯ ಸ್ವಚ್ಛತೆ ಮತ್ತು ನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರಬಾರದು ಎಂದು ಸಚಿವರು ಎಚ್ಚರಿಕೆ ನೀಡಿದರು.

ಕನ್ನಡ ಭಾಷೆಯ ಶ್ರೀಮಂತಿಕೆ ಜಗತ್ತಿಗೇ ಮಾದರಿ: ಸಚಿವ ಚಲುವರಾಯಸ್ವಾಮಿ



"ಮುಂಜಾನೆಯ ಮೆರಗು"

ಮಂಡ್ಯ ನ, 01– ಕನ್ನಡ ಕೇವಲ ಸಂವಹನದ ಮಾಧ್ಯಮವಲ್ಲ. ಅದು ನಮ್ಮ ಸಂಸ್ಕೃತಿ, ಬದುಕು, ಪರಂಪರೆ ಹಾಗೂ ಹೆಮ್ಮೆಯ ಅಸ್ಮಿತೆಯಾಗಿದೆ. ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿರುವ ಕನ್ನಡ ಭಾಷೆಯ ಶ್ರೀಮಂತ ಸಾಹಿತ್ಯ ಪರಂಪರೆ ಜಗತ್ತಿಗೇ ಮಾದರಿಯಾಗಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ನಗರದ ಸರ್. ಎಂ. ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಭಾನುವಾರ ಆಯೋಜಿಸಲಾಗಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜ ಹಾಗೂ ತಾಯಿ ಭುವನೇಶ್ವರಿಯ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ನಮ್ಮ ಮಕ್ಕಳು ಕನ್ನಡದಲ್ಲಿಯೇ ಕನಸು ಕಾಣುವಂತಾಗಬೇಕು. ಜಗತ್ತಿನ ಜ್ಞಾನವನ್ನು ಕನ್ನಡದ ಮೂಲಕವೇ ಕಲಿಯುವ ಅವಕಾಶಗಳು ಹೆಚ್ಚಾಗಬೇಕು. ಅನ್ಯ ಭಾಷೆಗಳನ್ನು ಕಲಿಯುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಯಾವುದೇ ಭಾಷೆಯನ್ನು ಕಲಿತರೂ ಮಾತೃಭಾಷೆಯನ್ನು ಎಂದಿಗೂ ಮರೆಯಬಾರದು. ಕನ್ನಡ ಭಾಷೆಯ ಬಳಕೆ, ಬೆಳವಣಿಗೆ ಮತ್ತು ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ರಾಜ್ಯದಲ್ಲಿಯೇ ಅತಿ ಹೆಚ್ಚು ಅಪ್ಪಟ ಕನ್ನಡ ಮಾತನಾಡುವ ಜಿಲ್ಲೆಯೆಂಬ ಹೆಗ್ಗಳಿಕೆಯನ್ನು ಮಂಡ್ಯ ಹೊಂದಿದೆ. ಕನ್ನಡದ ನೆಲ, ನುಡಿ ಮತ್ತು ಸಂಸ್ಕೃತಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ಮಂಡ್ಯ ಜಿಲ್ಲೆಯಲ್ಲಿ ಕನ್ನಡ ಭಾಷೆಯ ಗರಿಮೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಕನ್ನಡ ಭಾಷೆ ಸಾವಿರಾರು ವರ್ಷಗಳ ಇತಿಹಾಸ, ಶ್ರೀಮಂತ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಹೊಂದಿದೆ. ಕನ್ನಡಿಗರ ಬದುಕು, ಆಚಾರ–ವಿಚಾರ ಹಾಗೂ ಸಾಮಾಜಿಕ ಮೌಲ್ಯಗಳಲ್ಲಿ ಕನ್ನಡದ ಪ್ರಭಾವ ಹಾಸುಹೊಕ್ಕಾಗಿದೆ. ಮುಂದಿನ ಪೀಳಿಗೆಗೆ ಕನ್ನಡದ ಮಹತ್ವವನ್ನು ತಿಳಿಸುವುದರ ಜೊತೆಗೆ ಶಿಕ್ಷಣ, ತಂತ್ರಜ್ಞಾನ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ಕನ್ನಡದ ಬಳಕೆಯನ್ನು ಉತ್ತೇಜಿಸಬೇಕು ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿ ಸಮಾಜಕ್ಕೆ ಕೊಡುಗೆ ನೀಡಿರುವ 35 ಸಾಧಕರನ್ನು ಈ ಬಾರಿಯ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆ ಸಲ್ಲಿಸಿದ ಸಚಿವರು, ಸಾಧಕರ ಸೇವೆ ಮತ್ತು ಕೊಡುಗೆಗಳು ಇತರರಿಗೂ ಪ್ರೇರಣೆಯಾಗಲಿ ಎಂದು ಆಶಿಸಿದರು.

ನಾಡು, ನುಡಿ ಮತ್ತು ಕನ್ನಡದ ಅಸ್ಮಿತೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ತಾಯಿ ಕನ್ನಡಾಂಬೆಯ ಸೇವೆಗೆ ಕಟಿಬದ್ಧರಾಗೋಣ. 'ಎಲ್ಲಾದರೂ ಇರು, ಎಂತಾದರೂ ಇರು, ಎಂದೆಂದಿಗೂ ನೀ ಕನ್ನಡವಾಗಿರು' ಎಂಬ ಕುವೆಂಪು ಅವರ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು, ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದ

ಮಲೆನಾಡಿನಿಂದ ಬರನಾಡಿನ ಮಡ್ರಳ್ಳಿ ಕೆರೆಗೆ ಹರಿದು ಬಂದ ತುಂಗಭದ್ರೆ



"ಮುಂಜಾನೆಯ ಮೆರಗು"

ಜಗಳೂರು ನ, 01– ಮಲೆನಾಡಿನ ಮಡಿಲಿನಿಂದ ಹರಿದು ಬರುವ ತುಂಗಭದ್ರೆಯ ನೀರು ಇದೀಗ ಬರದನಾಡು ಜಗಳೂರು ತಾಲೂಕಿನ ಕೆರೆಗಳತ್ತ ಹರಿದು ಬರುತ್ತಿದ್ದು, ಹಲವು ವರ್ಷಗಳ ನಿರೀಕ್ಷೆಗೆ ಕೊನೆಗೂ ಫಲ ಸಿಕ್ಕಂತಾಗಿದೆ.

ತಾಲೂಕಿನ 57 ಕೆರೆಗಳಿಗೆ ನೀರು ತುಂಬಿಸುವ ಮಹತ್ವಾಕಾಂಕ್ಷಿ ಯೋಜನೆಯಡಿ ಬಾಕಿ ಉಳಿದಿದ್ದ ನಾಲ್ಕು ಕೆರೆಗಳ ಪೈಕಿ ಗುರುಸಿದ್ಧಾಪುರ ಹಾಗೂ ರಂಗಯ್ಯನದುರ್ಗ ಕೆರೆಗಳಿಗೆ ಶುಕ್ರವಾರ ರಾತ್ರಿ ನೀರು ಹರಿದು ಬಂದಿದೆ. ಇನ್ನು ಅಗಸನಹಳ್ಳಿ ಮತ್ತು ಮಾಗಡಿ ಕೆರೆಗಳಿಗೆ ಎರಡು ದಿನಗಳಲ್ಲಿ ನೀರು ಹರಿದು ಬರಲಿದೆ ಎಂದು ಇಲಾಖೆಯ ಅಧಿಕಾರಿ ಆನಂದ್ ಮಾಹಿತಿ ನೀಡಿದ್ದಾರೆ.

ಕಳೆದ ಮೂರು ವರ್ಷಗಳ ಹಿಂದೆ–ಯೇ ಯೋಜನೆಯಡಿ 53 ಕೆರೆಗಳಿಗೆ ನೀರು ಹರಿಸಲಾಗಿತ್ತು. ಆದರೆ, ಉಳಿದ ನಾಲ್ಕು ಕೆರೆಗಳಿಗೆ ನೀರು ಪೂರೈಸಲು ಅರಣ್ಯ ಪ್ರದೇಶದಲ್ಲಿ ಪೈಪ್‌ಲೈನ್ ಅಳವಡಿಸುವ ಅಗತ್ಯವಿತ್ತು. ಅರಣ್ಯ ಇಲಾಖೆಯ ಅನುಮತಿ ದೊರೆಯುವುದು ವಿಳಂಬವಾದ ಹಿನ್ನೆಲೆಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗಿರಲಿಲ್ಲ.

ಇದೀಗ ಅರಣ್ಯ ಪ್ರದೇಶದಲ್ಲಿ ಪೈಪ್‌ಲೈನ್ ಅಳವಡಿಸಲು ಅನುಮತಿ ದೊರೆತ ಹಿನ್ನೆಲೆಯಲ್ಲಿ ಬಾಕಿ ಉಳಿದ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಪ್ರಾಯೋಗಿಕವಾಗಿ ನೀರು ಹರಿಸುವ ಕಾರ್ಯ ಆರಂಭವಾಗಿದ್ದು, ಗುರುಸಿದ್ಧಾಪುರ ಮತ್ತು ರಂಗಯ್ಯನದುರ್ಗ ಕೆರೆಗಳಿಗೆ ತುಂಗಭದ್ರೆಯ ನೀರು ಹರಿದು ಬಂದಿರುವುದು ಈ ಭಾಗದ ಜನರಲ್ಲಿ ಸಂತಸ ಮೂಡಿಸಿದೆ.

ದಶಕಗಳಿಂದ ಬರಗಾಲದ ಸಂಕಷ್ಟ ಎದುರಿಸುತ್ತಿರುವ ಜಗಳೂರು ತಾಲೂಕಿನ ರೈತರಿಗೆ ಕೆರೆಗಳಿಗೆ ನೀರು ಹರಿದು ಬರುತ್ತಿರುವುದು ಹೊಸ ಭರವಸೆ ಮೂಡಿಸಿದೆ. ಅಂತರ್ಜಲ ಮಟ್ಟ ವೃದ್ಧಿ, ಕೃಷಿ ಚಟುವಟಿಕೆಗಳಿಗೆ ಅನುಕೂಲ ಹಾಗೂ ಜಾನುವಾರುಗಳಿಗೆ ನೀರಿನ ಲಭ್ಯತೆ ಹೆಚ್ಚುವ ನಿರೀಕ್ಷೆ ಮೂಡಿದೆ. ಉಳಿದ ಎರಡು ಕೆರೆಗಳಿಗೂ ನೀರು ಹರಿದ ಬಳಿಕ 57 ಕೆರೆಗಳ ಯೋಜನೆ ಪೂರ್ಣ ಪ್ರಮಾಣದಲ್ಲಿ ಸಾಕಾರಗೊಂಡಂತಾಗಲಿದೆ.

ಬರದನಾಡಿನ ಕೆರೆಗಳಿಗೆ ತುಂಗಭದ್ರೆಯ ನೀರು ಹರಿಯುತ್ತಿರುವುದು ಈ ಭಾಗದ ರೈತರ ಪಾಲಿಗೆ ಸಂತಸದ ಸಂಗತಿಯಾಗಿದ್ದು, ರೈತರ ಮುಖದಲ್ಲಿ ಮಂದಹಾಸ ಮೂಡಿಸಿದೆ.

ಪಾಂಡರಾಪುರಕ್ಕೆ ಭಜನೆ, ಸಂಕೀರ್ತನೆಯೊಂದಿಗೆ ಭಕ್ತರ ಪಾದಯಾತ್ರೆ



"ಮುಂಜಾನೆಯ ಮೆರಗು"

ಜಗಳೂರು ನ, 01– ತಾಲ್ಲೂಕಿನ ಮೆದಕೇರನಹಳ್ಳಿ ಹಾಗೂ ಚಿಕ್ಕಬನ್ನಿಹಟ್ಟಿ ಗ್ರಾಮದ ಪಾಂಡುರಂಗ ವಿಠ್ಠಲ ಸ್ವಾಮಿಯ ಭಕ್ತರು ಮಹಾರಾಷ್ಟ್ರದ ಪಾಂಡರಾಪುರದಲ್ಲಿರುವ ವಿಠ್ಠಲ–ರುಕ್ಮಿಣಿ ದೇವರ ದರ್ಶನ ಪಡೆಯುವ ಉದ್ದೇಶದಿಂದ ಭಜನೆ, ಸಂಕೀರ್ತನೆ ಹಾಗೂ ಹರಿನಾಮ ಸ್ಮರಣೆಯೊಂದಿಗೆ ಸಾಮೂಹಿಕ ಪಾದಯಾತ್ರೆ ಕೈಗೊಂಡರು.

ತಾಲ್ಲೂಕಿನ ಕೆಚ್ಚೇನಹಳ್ಳಿ, ಹೊಸಕೆರೆ, ಗಡಿಮಾಕುಂಟೆ, ಕೊಟ್ಟೂರು ಮಾರ್ಗವಾಗಿ ಚಳ್ಳಕೆರೆ–ಅರಭಾವಿ ರಾಜ್ಯ ಹೆದ್ದಾರಿಯಲ್ಲಿ ಸಾಗಿದ ಪಾದಯಾತ್ರೆಯಲ್ಲಿ ನೂರಾರು ಭಕ್ತರು ಉತ್ಸಾಹದಿಂದ ಪಾಲ್ಗೊಂಡಿದ್ದರು. ದಾರಿಯುದ್ದಕ್ಕೂ 'ವಿಠ್ಠಲ, ವಿಠ್ಠಲ, ಪಾಂಡುರಂಗ, ಜೈ ಪಾಂಡುರಂಗ' ಎಂಬ ನಾಮಸ್ಮರಣೆ ಮೊಳಗಿತು. ತಬಲ, ಹಾರ್ಮೋನಿಯಂ ಸೇರಿದಂತೆ ವಿವಿಧ ವಾದ್ಯಗಳ ನಾದದೊಂದಿಗೆ ಪಾಂಡುರಂಗ ಸ್ವಾಮಿಯ ಭಕ್ತಿಗೀತೆಗಳನ್ನು ಹಾಡುತ್ತಾ ಭಕ್ತರು ಹೆಜ್ಜೆ ಹಾಕಿದರು.


ಪಾದಯಾತ್ರೆಯಲ್ಲಿ ಮಹಿಳೆಯರು, ಪುರುಷರು, ಯುವಕರು ಹಾಗೂ ವಯೋವೃದ್ಧರು ಸೇರಿದಂತೆ ವಿವಿಧ ವಯೋಮಾನದ ಭಕ್ತರು ಭಾಗವಹಿಸಿದ್ದರು. ದಾರಿಯುದ್ದಕ್ಕೂ ಭಜನೆ, ಹರಿನಾಮ ಸಂಕೀರ್ತನೆ ಹಾಗೂ ವಿಠ್ಠಲನ ಮಹಿಮೆಯನ್ನು ಸಾರುವ ಹಾಡುಗಳ ಮೂಲಕ ಭಕ್ತಿಮಯ ವಾತಾವರಣ ನಿರ್ಮಿಸಿದರು.

ಪಾಂಡರಾಪುರದ ವಿಠ್ಠಲ ದೇವರು ನಮ್ಮ ಆರಾಧ್ಯ ದೈವವಾಗಿದ್ದು, ಪ್ರತಿವರ್ಷ ಸಾಮೂಹಿಕವಾಗಿ ಭಜನೆ ಹಾಗೂ ಹರಿನಾಮ ಸ್ಮರಣೆಯೊಂದಿಗೆ ಪಾದಯಾತ್ರೆ ಕೈಗೊಂಡು ದೇವರ ದರ್ಶನ ಪಡೆಯುವುದು ವಿಶೇಷ ಸಂಪ್ರದಾಯವಾಗಿದೆ. ಇದರಿಂದ ಮನಸ್ಸಿಗೆ ನೆಮ್ಮದಿ, ಆತ್ಮತೃಪ್ತಿ ದೊರೆಯುವುದರ ಜತೆಗೆ ಭಕ್ತರಲ್ಲಿ ಧಾರ್ಮಿಕ ಶ್ರದ್ಧೆ ಮತ್ತು ಸಾಮರಸ್ಯ ಹೆಚ್ಚುತ್ತದೆ ಎಂದು ಭಕ್ತರು ತಿಳಿಸಿದರು.

ಪಾದಯಾತ್ರೆಯಲ್ಲಿ ಪಾಲ್ಗೊಂಡ ಭಕ್ತರು ಬಿಳಿ ಮತ್ತು ಕೆಂಪು ಬಣ್ಣದ ಸಮವಸ್ತ್ರ ಧರಿಸಿ, ಕೈಯಲ್ಲಿ ಪಾಂಡುರಂಗ ಸ್ವಾಮಿಯ ಧ್ವಜಗಳನ್ನು ಹಿಡಿದು ಸಾಗಿದರು. ಶಿಸ್ತುಬದ್ಧವಾಗಿ ಸಾಲುಗಟ್ಟಿ ಸಾಗಿದ ಭಕ್ತರ ತಂಡ ರಸ್ತೆಯುದ್ದಕ್ಕೂ ಭಕ್ತಿಯ ಪರಾಕಾಷ್ಠೆ ಮೆರೆದಿತು.

ಕರವೇಯಿಂದ ಕನ್ನಡ ರಾಜ್ಯೋತ್ಸವ ಆಚರಣೆ: ವಿವಿಧ ಇಲಾಖೆಗಳ

10 ಮಂದಿ ಸಾಧಕರಿಗೆ ಸೇವಾರತ್ನ ಪ್ರಶಸ್ತಿ ಪ್ರದಾನ



"ಮುಂಜಾನೆಯ ಮೆರಗು"

ಜಗಳೂರು, ನ, 01– ಕರ್ನಾಟಕ ರಕ್ಷಣಾ ವೇದಿಕೆ ಜಗಳೂರು ತಾಲೂಕು ಘಟಕದ ವತಿಯಿಂದ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಪಟ್ಟಣದ ಹೊಸ ಖಾಸಗಿ ಬಸ್ ನಿಲ್ದಾಣದ ಮುಂಭಾಗದಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಕನ್ನಡ ಧ್ವಜಾರೋಹಣ ನೆರವೇರಿಸುವ ಮೂಲಕ ನಾಡು–ನುಡಿಯ ಅಭಿಮಾನವನ್ನು ಮೆರೆದರು.

ಈ ಸಂದರ್ಭದಲ್ಲಿ ಕನ್ನಡ ಯುವಶಕ್ತಿ ಘಟಕದ ಅಧ್ಯಕ್ಷ ಮೊಬೈಲ್ ಮಂಜುನಾಥ್ ಮಾತನಾಡಿ, ನಾವು ನಮ್ಮ ಭಾಷೆಯನ್ನು ಯಾವುದೇ ಕಾರಣಕ್ಕೂ ಬಲಿಕೊಟ್ಟು ಉದಾರಿಗಳಾಗಬಾರದು. ಭಾಷೆಯ ಮೇಲಿನ ವ್ಯಾಮೋಹ ಅತಿಯಾಗಬಾರದು, ಆದರೆ ಕನ್ನಡದ ಬಗ್ಗೆ ಅಭಿಮಾನ ಪ್ರತಿಯೊಬ್ಬರಲ್ಲೂ ಇರಬೇಕು. ಕನ್ನಡಾಭಿಮಾನವಿದ್ದಾಗ ಮಾತ್ರ ಭಾಷೆಯನ್ನು ಉಳಿಸಿ ಬೆಳೆಸಲು ಸಾಧ್ಯ. ಕನ್ನಡ ಭಾಷೆ ತಿಳಿಯದವರಿಗೆ ಕನ್ನಡ ಕಲಿಸುವ ಕಾರ್ಯಕ್ಕೆ ಪ್ರತಿಯೊಬ್ಬರೂ ಮುಂದಾಗಬೇಕು ಎಂದು ಹೇಳಿದರು.

ಕರವೇ ತಾಲೂಕು ಘಟಕದ ಅಧ್ಯಕ್ಷ ಮಹಾಂತೇಶ್ ಮಾತನಾಡಿ, ನಾಡು, ನುಡಿ ಹಾಗೂ ಜಲದ ವಿಚಾರ ಬಂದಾಗ ಎಲ್ಲರೂ ಪಕ್ಷಾತೀತವಾಗಿ ಒಂದಾಗಬೇಕು. ಕನ್ನಡ ಭಾಷೆಯ ಉಳಿವಿಗಾಗಿ ಇಂದಿನ ಯುವಜನತೆ ಹೆಚ್ಚಿನ ಜವಾಬ್ದಾರಿ ವಹಿಸಬೇಕು. ಫೇಸ್‌ಬುಕ್, ವಾಟ್ಸ್‌ಆ್ಯಪ್‌ಗಳಲ್ಲಿ ಮಾತ್ರ ಕನ್ನಡಾಭಿಮಾನ ಪ್ರದರ್ಶಿಸದೆ, ಪ್ರತಿನಿತ್ಯದ ಬದುಕಿನಲ್ಲೂ ಕನ್ನಡವನ್ನು ಬಳಸುವ ಮೂಲಕ ಭಾಷೆಯನ್ನು ಕಾಪಾಡಿಕೊಂಡು ಹೋಗಬೇಕು ಎಂದು ತಿಳಿಸಿದರು.

ಕರವೇ ಮಹಿಳಾ ಘಟಕದ ಅಧ್ಯಕ್ಷೆ ಶಾಹಿನ ಷಂಶುದ್ದೀನ್ ಮಾತನಾಡಿ, ಕರ್ನಾಟಕ ರಾಜ್ಯವು ತನ್ನದೇ ಆದ ಹಳದಿ–ಕೆಂಪು ಬಣ್ಣದ ಕನ್ನಡ ಬಾವುಟವನ್ನು ಹೊಂದಿದೆ. ಕನ್ನಡ ಹೋರಾಟಗಾರ ಎಂ. ರಾಮಮೂರ್ತಿಯವರು ಈ ಬಾವುಟವನ್ನು ರೂಪಿಸಿ ಬಳಕೆಗೆ ತಂದರು. ಅಂದಿನಿಂದ ಇಂದಿನವರೆಗೆ ಈ ಬಾವುಟ ಕೋಟ್ಯಂತರ ಕನ್ನಡಿಗರ ಅಸ್ಮಿತೆ ಹಾಗೂ ಸ್ವಾಭಿಮಾನದ ಸಂಕೇತವಾಗಿ ಗುರುತಿಸಿಕೊಂಡಿದೆ ಎಂದರು.

ವಿವಿಧ ಇಲಾಖೆಗಳ ಸಾಧಕರಿಗೆ ಸೇವಾರತ್ನ ಗೌರವ

ಇದೇ ಸಂದರ್ಭದಲ್ಲಿ ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ಹಾಗೂ ಯಾವುದೇ ಕಳಂಕವಿಲ್ಲದೆ ನಿರ್ವಹಿಸುತ್ತಾ ಬಂದಿರುವ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಗುರುತಿಸಿ ಸೇವಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪೊಲೀಸ್ ಇಲಾಖೆಯ ಮಧುರ, ಆರೋಗ್ಯ ಇಲಾಖೆಯ ಜನರಲ್ ಫಿಸಿಷಿಯನ್ ಡಾ. ಶಾಲಿನಿ, ಬೆಸ್ಕಾಂ ಇಲಾಖೆಯ ಮಲ್ಲಿಕಾರ್ಜುನ್, ಅರಣ್ಯ ಇಲಾಖೆಯ ನಿವೃತ್ತ ನೌಕರ ಬಸವರಾಜ್, ಪಶುಸಂಗೋಪನಾ ಇಲಾಖೆಯ ಡಾ. ಲಿಂಗರಾಜ್, ಪಟ್ಟಣ ಪಂಚಾಯಿತಿಯ ನೂರುಲ್ಲಾ ಶರೀಫ್, ಕಂದಾಯ ಇಲಾಖೆಯ ಶಿರಸ್ತೇದಾರ್ ಬದ್ರಿನಾಥ್, ಶಿಕ್ಷಣ ಇಲಾಖೆಯ ಅನಿತಾ ಹಾಗೂ ಗ್ರಂಥಾಲಯ ಇಲಾಖೆಯ ಶರಣಪ್ಪ ಅವರನ್ನು ಸನ್ಮಾನಿಸಲಾಯಿತು.



ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು



ಜಗಳೂರಿನ ಆರ್.ವಿ.ಎಸ್. ವಿದ್ಯಾಸಂಸ್ಥೆಯ ಸಂಸ್ಥಾಪಕರಾದ

ಶ್ರೀಯುತ ಆರ್.ಜೆ. ವೀರೇಶ್‌ರವರಿಗೆ

50ನೇ

ಜನ್ಮದಿನದ ಶುಭಾಶಯಗಳು

ಶುಭ ಕೋರುವವರು :

ಬಿ.ವಿ.ನಾಗರಾಜ್ ಮತ್ತು ಸ್ನೇಹಿತರು ಜಗಳೂರು.

"ನೊಂದವರಿಗೆ ನೆರವು" ಮೊದಲ ತಿಂಗಳ ಸಂಬಳದಲ್ಲಿ 5 ಸಾವಿರ ದೇಣಿಗೆ ನೀಡಿ ಮಾನವೀಯತೆ ಮೆರೆದ ಗೌತಮಿ



"ಮುಂಜಾನೆಯ ಮೆರಗು"

ಜಗಳೂರು, ನ, 01– ಪಿಎಂಶ್ರೀ ಯೋಜನೆಯಡಿ ಕಂಪ್ಯೂಟರ್ ಶಿಕ್ಷಕಿಯಾಗಿ ಆಯ್ಕೆಯಾದ ಜಗಳೂರು ವಿಧಾನಸಭಾ ಕ್ಷೇತ್ರದ ನಿಬಗೂರು ಗ್ರಾಮದ ಗೌತಮಿ ಎನ್.ಕೆ. ಅವರು ತಮ್ಮ ಮೊದಲ ತಿಂಗಳ ಸಂಬಳದಲ್ಲಿ 5 ಸಾವಿರವನ್ನು ನೊಂದವರ ನೆರವು ಟ್ರಸ್ಟ್‌ಗೆ ದೇಣಿಗೆಯಾಗಿ ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಶಾಸಕ ಬಿ.ದೇವೇಂದ್ರಪ್ಪ ಅವರನ್ನು ಭೇಟಿಯಾದ ಗೌತಮಿ ಅವರು, ಶಾಸಕರ ಸಮ್ಮುಖದಲ್ಲಿ ನೊಂದವರ ನೆರವು ಟ್ರಸ್ಟ್‌ಗೆ 5 ಸಾವಿರ ದೇಣಿಗೆ ನೀಡಿದರು. ಸಮಾಜದ ಸಂಕಷ್ಟದಲ್ಲಿರುವವರಿಗೆ ನೆರವಾಗಬೇಕೆಂಬ ಸದುದ್ದೇಶದಿಂದ ತಮ್ಮ ಮೊದಲ ತಿಂಗಳ ವೇತನದಲ್ಲಿ ಒಂದು ಭಾಗವನ್ನು ದೇಣಿಗೆಯಾಗಿ ನೀಡಿರುವುದು ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಶಾಸಕ ಬಿ.ದೇವೇಂದ್ರಪ್ಪ ಅವರು ಶಿಕ್ಷಕಿಯಾಗಿ ಆಯ್ಕೆಯಾದ ಗೌತಮಿ ಅವರಿಗೆ ಸಿಹಿ ತಿನ್ನಿಸಿ ಅಭಿನಂದಿಸಿ, ಅವರ ಮುಂದಿನ ಶೈಕ್ಷಣಿಕ ಹಾಗೂ ವೃತ್ತಿಜೀವನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ನಿಬಗೂರು ಗ್ರಾಮದ ಕಾಂಗ್ರೆಸ್ ಮುಖಂಡ ಕೃಷ್ಣಪ್ಪ ಅವರ ಪುತ್ರಿಯಾದ ಗೌತಮಿ ಅವರ ಈ ಸಮಾಜಮುಖಿ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.



ವೈಶಿಷ್ಟ್ಯಪೂರ್ಣ ಪರಂಪರೆಯ ಕನ್ನಡಿಗರ ಅಸ್ಮಿತೆಯನ್ನು ಉಳಿಸಿ ಬೆಳೆಸೋಣ: ಬಿ.ದೇವೇಂದ್ರಪ್ಪ ಕರೆ



"ಮುಂಜಾನೆಯ ಮೆರಗು"

ಜಗಳೂರು ನ, 01– ಕನ್ನಡ ಭಾಷೆ, ಸಂಸ್ಕೃತಿ, ಸಾಹಿತ್ಯ ಹಾಗೂ ಸಂಗೀತಗಳ ಮೂಲಕ ವಿಶಿಷ್ಟ ಪರಂಪರೆಯನ್ನು ಹೊಂದಿರುವ ಕನ್ನಡಿಗರ ಅಸ್ಮಿತೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಶಾಸಕ ಬಿ.ದೇವೇಂದ್ರಪ್ಪ ಕರೆ ನೀಡಿದರು.

ಪಟ್ಟಣದ ಬಯಲು ರಂಗಮಂದಿರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಭಾನುವಾರ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅನ್ಯಭಾಷೆಗಳನ್ನು ಗೌರವಿಸೋಣ, ಆದರೆ ನಮ್ಮ ಕನ್ನಡತನವನ್ನು ಎಂದಿಗೂ ಮರೆಯಬಾರದು. ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿರುವ ಕನ್ನಡ ಭಾಷೆ ವಿಶ್ವದ ಅತ್ಯಂತ ಶ್ರೀಮಂತ ಹಾಗೂ ಹಿರಿಮೆಯ ಭಾಷೆಗಳಲ್ಲಿ ಒಂದಾಗಿದೆ. ಕನ್ನಡದ ಅನೇಕ ಕವಿಗಳು, ಸಾಹಿತಿಗಳು ತಮ್ಮ ಕವನ, ಕೃತಿಗಳ ಮೂಲಕ ಕನ್ನಡ ನಾಡು, ನುಡಿ, ನೆಲ, ಜಲದ ಮಹತ್ವವನ್ನು ಜಗತ್ತಿಗೆ ಪರಿಚಯಿಸಿದ್ದಾರೆ. ಕನ್ನಡ ಭಾಷೆ ಹಾಗೂ ನೆಲ, ಜಲಕ್ಕೆ ಧಕ್ಕೆಯುಂಟಾದ ಸಂದರ್ಭದಲ್ಲಿ ತ್ಯಾಗ ಮನೋಭಾವದಿಂದ ಅವುಗಳ ಸಂರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಬೇಕು ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ಮುಂದಿನ ವರ್ಷ 125ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು 125ಕ್ಕೆ 125 ಅಂಕ ಗಳಿಸುವಂತೆ ಪ್ರೇರೇಪಿಸುವ ಉದ್ದೇಶದಿಂದ ವಿಶೇಷ ಪ್ರೋತ್ಸಾಹ ನೀಡಲಾಗುತ್ತಿದೆ. ಈ ಬಾರಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪೂರ್ಣ ಅಂಕ ಗಳಿಸಿದ 53 ವಿದ್ಯಾರ್ಥಿಗಳಿಗೆ 'ಕನ್ನಡ, ಕನ್ನಡಿಗ, ಕರ್ನಾಟಕ' ಪುಸ್ತಕದ ಜೊತೆಗೆ ತಲಾ 1,125 ನಗದು ಬಹುಮಾನ ನೀಡಿ ಗೌರವಿಸಲಾಗುತ್ತಿದೆ ಎಂದರು.

ತಹಶೀಲ್ದಾರ್ ಕೆ.ಗುರುಬಸವರಾಜ್ ಧ್ವಜಸಂದೇಶ ನೀಡಿ, ನಾಡಿನ ಸಮಸ್ತ ಜನತೆಗೆ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳನ್ನು ಕೋರಿದರು.

ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರು ಹಾಗೂ ಹಿರಿಯ ನಾಗರಿಕರ ಸಂಘದ ತಾಲೂಕು ಅಧ್ಯಕ್ಷರಾದ ಸಿ.ತಿಪ್ಪೇಸ್ವಾಮಿ ಸೇರಿದಂತೆ ಗಣ್ಯರು ಮಾತನಾಡಿದರು.

> ಜೀವನಪೂರ್ತಿ ತಲೆತಗ್ಗಿಸುವಂತೆ ಮಾಡುವ ಮೊಬೈಲ್ ಗೀಳಿನಿಂದ ದೂರವಿದ್ದು, ಜೀವನಪೂರ್ತಿ ತಲೆ ಎತ್ತಿ ನಡೆಯುವಂತೆ ಮಾಡುವ ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಸಂಸ್ಕಾರಯುತ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ರೂಪಿಸಿಕೊಳ್ಳುವ ಮೂಲಕ ತಂದೆ–ತಾಯಿ, ಗುರುಗಳು ಹಾಗೂ ಕನ್ನಡ ನಾಡಿಗೆ ಕೀರ್ತಿ ತರಬೇಕು.
>
> **ಬಿ.ದೇವೇಂದ್ರಪ್ಪ, ಶಾಸಕರು.**

ಇದೇ ಸಂದರ್ಭದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ಆಕರ್ಷಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಕನ್ನಡ ಭಾಷಾ ಪರೀಕ್ಷೆಯಲ್ಲಿ 125ಕ್ಕೆ 125 ಅಂಕ ಗಳಿಸಿದ 53 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾ.ಪಂ. ಇಒ ಕೆಂಚಪ್ಪ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಲೋಕ್ಯಾನಾಯ್ಕ, ಬಿಇಒ ಹಾಲಮೂರ್ತಿ, ಪೊಲೀಸ್ ಇನ್ಸ್‌ಪೆಕ್ಟರ್ ಸಿದ್ರಾಮಯ್ಯ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ತಿಮ್ಮರಾಯಪ್ಪ, ಮುಖಂಡರಾದ ಬಿ.ಮಹೇಶ್ವರಪ್ಪ, ಶಕೀಲ್ ಅಹಮ್ಮದ್, ಶೇಕ್ ದಾದಾಪೀರ್, ಪಲ್ಲಾಗಟ್ಟೆ ಶೇಖರಪ್ಪ, ಗೌಸ್ ಅಹಮ್ಮದ್, ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳಾದ ಮಹೇಶ್ವರಪ್ಪ, ಸಾಧಿಕ್ ಉಲ್ಲಾ, ಶ್ವೇತಾ, ನಿತಿನ್ ಬಲ್ಲವರ್, ಅಶೋಕ, ರಾಘವೇಂದ್ರ, ಶಿವಮೂರ್ತಿ, ಡಾ.ಲಿಂಗರಾಜ್, ಶಶಿಕಾಂತ್, ಶಿವಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

